ಸಂಪಾದಕರು: ರವಿಕುಮಾರ್ ಸಿ.ಹೆಚ್. RNI: KARKAN/2021/80805 ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily

SP NEWS ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:105 Date:09-05-2026 Saturday RNI NO : KARKAN/2021/80805 L2/RNP-1285/TMR/2025-27 Page :4 Price: 1.00

ಸಂಪುಟ: 05 ಸಂಚಿಕೆ: 105 ಪುಟ : 4 ಬೆಲೆ: 1.00 ರೂ


## ಸಣ್ ಸುದ್ದಿ

### ಮೇ 12ರಂದು ಬಹಿರಂಗ ಹರಾಜು

ತುಮಕೂರು: ಕೊರಟಗೆರೆ ತಾಲ್ಲೂಕು ಬೂದಗವಿ ಶ್ರೀ ಸಿದ್ದೇಶ್ವರಸ್ವಾಮಿ ದೇವಸ್ಥಾನಕ್ಕೆ ಸೇರಿದ ದಾಸೋಹ ನಿಲಯದ ಉಗ್ರಾಣದಲ್ಲಿ ಹೆಚ್ಚುವರಿಯಾಗಿ ಸಂಗ್ರಹವಾಗಿರುವ ಅಕ್ಕಿಯನ್ನು ಮೇ 12ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಸಿದ್ದೇಶ್ವರಸ್ವಾಮಿ ದೇವಾಲಯದ ದಾಸೋಹ ಭವನದ ಆವರಣದಲ್ಲಿ ಬಹಿರಂಗ ಹರಾಜು ಮಾಡಲಾಗುವುದು.

ಆಸಕ್ತರು ಹರಾಜಿಗೂ ಮುಂಚಿತವಾಗಿ 10,000 ರೂ. ಗಳನ್ನು ಮುಂಗಡವಾಗಿ ಪಾವತಿಸಬೇಕು. ಹರಾಜಿನಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಆಧಾರ್ ಕಾರ್ಡ್ ಸಲ್ಲಿಸಬೇಕು. ಆಸಕ್ತರು ಹರಾಜಿನ ಮೂಲಕ ಅಕ್ಕಿಯನ್ನು ಪಡೆಯಬಹುದಾಗಿದೆ ಎಂದು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಂಗನವಾಡಿ ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆಗೆ ಅವಕಾಶ

ತುಮಕೂರು: ಕುಣಿಗಲ್ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಕೆ. ಬ್ಯಾಡರಹಳ್ಳಿ ಮತ್ತು ರಾಜೇಂದ್ರಪುರ ಅಂಗನವಾಡಿ ಕೇಂದ್ರಗಳ ಸಹಾಯಕಿ ಹುದ್ದೆಗೆ ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗಿದೆ.

ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳ ಆಯ್ಕೆ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ ಜೂನ್ 13ರ ಸಂಜೆ 5.30 ಗಂಟೆಯೊಳಗಾಗಿ ಪೂರಕ ದಾಖಲೆಗಳೊಂದಿಗೆ ಕುಣಿಗಲ್ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಐಟಿಐ ದಾಖಲಾತಿಗಾಗಿ ಅರ್ಜಿ ಆಹ್ವಾನ

ತುಮಕೂರು: ತುರುವೇಕೆರೆ ವೈ.ಟಿ.ರಸ್ತೆಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2026–27ನೇ ಸಾಲಿನ ಐಟಿಐ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಎಸ್.ಎಸ್.ಎಲ್.ಸಿ. ಉತ್ತೀರ್ಣ, ಪಿಯುಸಿ ಉತ್ತೀರ್ಣ/ ಅನುತ್ತೀರ್ಣ ಅಭ್ಯರ್ಥಿಗಳು ಫಿಟ್ಟರ್, ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಕೋಪಾ, ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್, ಅಡ್ವಾನ್ಸ್ ಸಿಎನ್‌ಸಿ ಮೇಷಿನಿಂಗ್‌ಗಾಗಿ ವೆಬ್‌ಸೈಟ್ ವಿಳಾಸ www.cite.karnataka.gov.in ಮೂಲಕ ಮೇ 8ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9743539690/ 8884069548/ 9482929710/ 9449926855/ 9980129515ನ್ನು ಸಂಪರ್ಕಿಸಬೇಕೆಂದು ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

# ತಮಿಳುನಾಡಿನ ರಾಜಕೀಯ ಬಿಕ್ಕಟ್ಟು ಅಂತ್ಯ– ವಿಜಯ್ ಸಿಎಂ ಹಾದಿ ಸುಗಮ

# ಮೈತ್ರಿ ಸರ್ಕಾರದ ಸಿಎಂ ಆಗಿ ವಿಜಯ್ ಇಂದು ಪ್ರಮಾಣ ವಚನ

ಚೆನ್ನೈ: ತಮಿಳುನಾಡಿನಲ್ಲಿ ನೂತನ ಸರ್ಕಾರ ರಚಿಸುವ ಕಸರತ್ತಿನಲ್ಲಿ ಕೊನೆಗೂ ವಿಜಯ್ ಯಶಸ್ವಿಯಾಗಿದ್ದು, ಕಾಂಗ್ರೆಸ್, ವಿಸಿಕೆ, ಸಿಪಿಐ ಹಾಗೂ ಸಿಪಿಐ(ಎಂ) ಪಕ್ಷಗಳ ಬೆಂಬಲದೊಂದಿಗೆ ಟಿವಿಕೆ ಬಹುಮತದ ಮೈತ್ರಿ ಸರ್ಕಾರ ರಚಿಸಲು ಸಿದ್ಧವಾಗುವ ಮೂಲಕ ಕಳೆದ ಕೆಲವು ದಿನಗಳ ರಾಜಕೀಯ ಹಗ್ಗಜಗ್ಗಾಟಕ್ಕೆ ತೆರೆಬೀಳುವಂತಾಗಲಿದೆ ಎಂದು ವರದಿ ತಿಳಿಸಿದೆ.

ಟಿವಿಕೆ ಮೂಲಗಳ ಪ್ರಕಾರ, ರಾಜ್ಯಪಾಲರನ್ನು ಭೇಟಿಯಾಗಲು ವಿಜಯ್ ಅವರು ಅನುಮತಿ ಕೇಳಿದ್ದು, ಪ್ರಮುಖ ಪ್ರಾದೇಶಿಕ ಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ರಚಿಸುವ ಹಕ್ಕು ಮಂಡಿಸಲಿದ್ದಾರೆ ಎಂದು ತಿಳಿಸಿದೆ. ವಿಜಯ್ ಅವರು ರಾಜ್ಯಪಾಲರನ್ನು ಭೇಟಿಯಾಗುವ ವೇಳೆಯಲ್ಲಿ ವಿಸಿಕೆ, ಸಿಪಿಐ ಹಾಗೂ ಸಿಪಿಐಎಂ ಜಂಟಿ ಪತ್ರಿಕಾಗೋಷ್ಠಿ ನಡೆಸಿ ಟಿವಿಕೆಗೆ ಬೆಂಬಲ ನೀಡುವ ಬಗ್ಗೆ ಔಪಚಾರಿಕವಾಗಿ ಘೋಷಿಸುವ ಸಾಧ್ಯತೆ ಇದ್ದಿರುವುದಾಗಿ ವರದಿ ತಿಳಿಸಿದೆ.

**ಮ್ಯಾಜಿಕ್ ಸಂಖ್ಯಾಬಲ:**

ವಿಜಯ್ ಪಕ್ಷ ಚುನಾವಣೆಯಲ್ಲಿ 107 ಸ್ಥಾನಗಳನ್ನು ಪಡೆದಿದೆ. ಅಲ್ಲದೇ ಕಾಂಗ್ರೆಸ್ ನ 05, ಸಿಪಿಐ 02, ಸಿಪಿಐ(ಎಂ) 2 ಹಾಗೂ ವಿಕೆಯ 02 ಶಾಸಕರು ಬೆಂಬಲ ನೀಡಲು ಒಪ್ಪಿಗೆ ಸೂಚಿಸಿಸುವ




ಮೂಲಕ ಸರ್ಕಾರ ರಚಿಸಲು ಅಗತ್ಯವಿರುವ 118 ಸ್ಥಾನಗಳ ಬೆಂಬಲ ಪಡೆದುಕೊಂಡಂತಾಗಿದೆ. ಈ ಮೂಲಕ ತಮಿಳುನಾಡು ರಾಜಕೀಯದಲ್ಲಿ ತಲೆದೋರಿದ್ದ ಬಿಕ್ಕಟ್ಟು ಕೊನೆಗೊಂಡಂತಾಗಿದೆ. ಬಹುಮತದ ಕೊರತೆ ಎದುರಿಸುತ್ತಿದ್ದ ಟಿವಿಕೆ ಮುಖ್ಯಸ್ಥ ವಿಜಯ್ ಅವರಿಗೆ ಕೊನೆಗೂ ಮ್ಯಾಜಿಕ್ ನಂಬರ್ ಸಿಕ್ಕಿದ್ದು, ಕಾಂಗ್ರೆಸ್ ನಂತರ ಸಿಪಿಐ ಮತ್ತು ವಿಸಿಕೆ ಸಹ ಬೆಂಬಲ ಘೋಷಿಸಿವೆ. ಹೀಗಾಗಿ ದಳಪತಿ ವಿಜಯ್ ಅವರು ಶೀಘ್ರದಲ್ಲೇ ತಮಿಳುನಾಡಿನ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ವಿಜಯ್ ನೇತೃತ್ವದ ಸಂಪುಟದಲ್ಲಿ ಸಣ್ಣ ಮಿತ್ರಪಕ್ಷಗಳು ಸಹ ಪ್ರಾತಿನಿಧ್ಯವನ್ನು ಹೊಂದಿರುತ್ತವೆ. ವಿಸಿಕೆ ಒಂದು ಸಚಿವ ಸ್ಥಾನವನ್ನು ಪಡೆಯುತ್ತದೆ, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ(ಸಿಪಿಐ) ಮತ್ತು ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ–ಮಾರ್ಕ್ಸಿಸ್ಟ್(ಸಿಪಿಎಂ)ಗೆ ಎರಡು ಸಚಿವ ಸ್ಥಾನ ನೀಡಲಾಗುವುದು ಎಂದು ಮೂಲಗಳು ತಿಳಿಸಿವೆ.

ವಿಸಿಕೆ ಮುಖ್ಯಸ್ಥ ಥೋಲ್ ತಿರುಮಾವಲವನ್ ಅವರೇ ವಿಜಯ್ ಸಂಪುಟ ಸೇರುವ ಸಾಧ್ಯತೆ ಇದೆ.

ಇನ್ನು ಡಿಎಂಕೆಯನ್ನು ತೊರೆದು ಟಿವಿಕೆಗೆ ಷರತ್ತುಬದ್ಧ ಬೆಂಬಲ ನೀಡಿದ ಕಾಂಗ್ರೆಸ್ ಸಹ ಎರಡು ಸಚಿವ ಸ್ಥಾನಗಳನ್ನು ನಿರೀಕ್ಷಿಸುತ್ತಿದೆ ಎಂದು ಮೂಲಗಳು ತಿಳಿಸಿವೆ. ತಲಾ ಇಬ್ಬರು ಶಾಸಕರನ್ನು ಹೊಂದಿರುವ ವಿಸಿಕೆ, ಸಿಪಿಐ ಮತ್ತು ಸಿಪಿಎಂಗಳು ಉನ್ನತ ಮಟ್ಟದ ಚರ್ಚೆ ನಡೆಸಿದ ನಂತರ ಇಂದು ಟಿವಿಕೆಗೆ ತಮ್ಮ ಬೆಂಬಲ ನೀಡುವುದಾಗಿ ಘೋಷಿಸಿವೆ.

# ಕೊರಟಗೆರೆ ತಾಲ್ಲೂಕಿಗೆ ಜಿ.ಪಂ. ಸಿಇಓ ಭೇಟಿ: ನಿವೇಶನ ಹಂಚಿಕೆಗೆ ಮಂಜೂರಾದ ಸ್ಥಳ ಪರಿಶೀಲನೆ

ಸೂರ್ಯಪ್ರಗತಿ ನ್ಯೂಸ್.ಕಾಂ

ತುಮಕೂರು: ಕೊರಟಗೆರೆ ತಾಲ್ಲೂಕಿನ ಎಲೆರಾಂಪುರ ಹಾಗೂ ನೀಲಗೊಂಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ.ಅಶ್ವಿಜಾ ಅವರು ಶುಕ್ರವಾರ ದಿಢೀರ್ ಭೇಟಿ ನೀಡಿ ಕುಡಿಯುವ ನೀರು ಹಾಗೂ ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆಗೆ ಮಂಜೂರಾದ ಸ್ಥಳ ಪರಿಶೀಲನೆ ನಡೆಸಿ, ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ಕೊರಟಗೆರೆ ತಾಲ್ಲೂಕಿನ ಎಲೆರಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇರಕಸಂದ್ರ ಗ್ರಾಮದ ಇರಕಸಂದ್ರ ಕೆರೆ ಅಂಗಳದ ಕೊಳವೆ ಬಾವಿಯು ನೀರಿನಿಂದ ಮುಳುಗಿ ಹೂಳು ತುಂಬಿದ್ದು, ಕೊಳವೆ ಬಾವಿಯನ್ನು ಪುನಶ್ಚೇತನಗೊಳಿಸಿ ಗ್ರಾಮದ ಜನರಿಗೆ ಕುಡಿಯುವ ನೀರು ಪೂರೈಸಲು ಅಧಿಕಾರಿಗಳಿಗೆ ಸೂಚಿಸಿದರು.

ಕೊರಟಗೆರೆ ತಾಲೂಕಿನ ನೀಲಗೊಂಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೀಲಗೊಂಡನಹಳ್ಳಿ ಗ್ರಾಮದ ಸರ್ವೆ ನಂಬರ್ 27ರಲ್ಲಿ ಮಂಜೂರಾದ 2 ಎಕರೆ ಹಾಗೂ ಸರ್ವೆ ನಂಬರ್ 39ರಲ್ಲಿ ನಿವೇಶನ ಹಂಚಿಕೆಗೆ ಮಂಜೂರಾದ 4 ಎಕರೆ ಜಾಗವನ್ನು ಹಾಗೂ ಸರ್ವೆ ನಂಬರ್ 61ರ ಸರ್ಕಾರಿ ಗೋಮಾಳದ ಸ್ಥಳಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆನಂತರ ಕಾರ್ಯ ನಿರ್ವಾಹಕ ಅಧಿಕಾರಿಗಳು, ಸಹಾಯಕ





ನಿರ್ದೇಶಕರು (ಗ್ರಾ.ಉ), ಕಂದಾಯ ಇಲಾಖೆ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ದಾಖಲಾತಿಗಳನ್ನು ಪರಿಶೀಲಿಸಿ, ಸಾಧಕ–ಬಾಧಕಗಳ ಬಗ್ಗೆ ಚರ್ಚಿಸಿ, ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಕೊರಟಗೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಅಪೂರ್ವ ಸಿ. ಅನಂತರಾಮು, ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ(ಗ್ರಾ.ಉ.) ಎಂ.ಬಿ.ಗುರುಮೂರ್ತಿ, ತಾಲ್ಲೂಕು ಪಂಚಾಯಿತಿ ವಸತಿ ಶಾಖೆಯ ತಾಲ್ಲೂಕು ನೋಡೆಲ್ ಅಧಿಕಾರಿ ವೈ.ಆರ್. ಶಿವಪ್ರಸನ್ನ, ಕೊರಟಗೆರೆ ಗ್ರಾಮಾಂತರ ಮತ್ತು ನಗರ ಯೋಜನಾ ಪ್ರಾಧಿಕಾರದ ಅಧಿಕಾರಿ ಧರಣೇಶ್, ಉಪ ತಹಶೀಲ್ದಾರ್ ಮಧುಚಂದ್ರ, ನೀಲಗೊಂಡನಹಳ್ಳಿ ಗ್ರಾಮ ಪಂಚಾಯಿತಿ ಪಿಡಿಒ ಎನ್. ಮಂಜುಳ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.






# ತುಮಕೂರು ಗಂಗಸಂದ್ರದಲ್ಲಿ ಗ್ರಾಮ ಒಂದು, ಹಲವು ಸಮಸ್ಯೆ

ಸೂರ್ಯಪ್ರಗತಿ ನ್ಯೂಸ್.ಕಾಂ

ತುಮಕೂರು : ತುಮಕೂರು ಮಹಾನಗರ ವ್ಯಾಪ್ತಿಗೆ ಒಳಪಡುವ ಗಂಗಸಂದ್ರ ಗ್ರಾಮ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು, ಸಮಸ್ಯೆಗಳಿಂದ ಸಾರ್ವಜನಿಕರು ಪ್ರತಿನಿತ್ಯ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ತುಮಕೂರು ಮಹಾನಗರ ಪಾಲಿಕೆ ವಾರ್ಡ್ ವ್ಯಾಪ್ತಿಗೆ ಬರುವ ಗಂಗಸಂದ್ರ ಇತ್ತೀಚಿಗೆ ನಗರದ ಪ್ರತಿಷ್ಠಿತ ಬಡಾವಣೆ ಎನಿಸಿದ್ದು, ಶಾಲಾ ಕಾಲೇಜು, ಅಂಗಡಿ ಮುಂಗಟ್ಟು, ವಾಣಿಜ್ಯ ಸಂಕೀರ್ಣ, ಗೃಹ ಸಂಕೀರ್ಣ ಇತ್ಯಾದಿಗಳು ನಿರ್ಮಾಣವಾಗಿದ್ದು, ಕನಿಷ್ಠ ಮೂಲಭೂತ ಸೌಕರ್ಯವಿಲ್ಲದೆ ಅಭಿವೃದ್ಧಿ ದೃಷ್ಟಿಯಲ್ಲಿ ಹಿಂದೆ ಬಿದ್ದಿದ್ದು, ಸೌಕರ್ಯ ಒದಗಿಸದ ಪಾಲಿಕೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗುತ್ತಿದೆ. ಬಡ ಮಧ್ಯಮವರ್ಗ ಸೇರಿದಂತೆ





ಎಲ್ಲ ವರ್ಗಗಳ ಜನರು ಗಂಗಸಂದ್ರ ಗ್ರಾಮದಲ್ಲಿ ವಾಸವಾಗಿದ್ದು, ಪ್ರತಿನಿತ್ಯ ತಮ್ಮ ಕೆಲಸಗಳಿಗಾಗಿ ತುಮಕೂರು ನಗರದ ವಿವಿಧ ಭಾಗಗಳಿಗೆ ತೆರಳುತ್ತಾರೆ. ಆದರೆ ಸೂಕ್ತ ಬಸ್ ನಿಲ್ದಾಣವಿಲ್ಲದೆ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ಬಸ್ಸುಗಳಲ್ಲಿ ತೆರಳಲು ಬರುವ ಪ್ರಯಾಣಿಕರು ಗ್ರಾಮದ ಅಂಗಡಿ ಮುಂಗಟ್ಟುಗಳ ಮುಂದೆ ಅಥವಾ ದೇವಾಲಯದ ಮುಂದೆ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದೀಗ ಬೇಸಿಗೆ ಕಾಲಾವಾದ್ದರಿಂದ ಬಿಸಿಲಿನಲ್ಲಿ ಗಂಟೆಗಟ್ಟಲೆ ನಿಲ್ಲಬೇಕಾದ ದುಸ್ಥಿತಿ ಎದುರಾಗಿದೆ. ಶಾಲಾ ವಿದ್ಯಾರ್ಥಿಗಳು, ಮಹಿಳೆಯರು, ಮಕ್ಕಳು, ರೋಗಿಗಳು, ವಯೋವೃದ್ಧರು ಮುಂತಾದವರು ಬಿಸಿಲಿನಲ್ಲೇ ನಿಂತು ಬಸ್ಸುಗಳಿಗೆ ಕಾಯುವುದು ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ಕಾರ್ಯ ವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ.


ನಾಲ್ಕನೇ ಪುಟಕ್ಕೆ


# ತಕ್ಷಣ ಹೇಮಾವತಿ ನೀರು ಹರಿಸಿ: ಸೊಗಡು ಶಿವಣ್ಣ ಆಗ್ರಹ

ಸೂರ್ಯಪ್ರಗತಿ ನ್ಯೂಸ್.ಕಾಂ

ತುಮಕೂರು: ಈ ವರ್ಷ ಇದೂವರೆಗೂ ಮಳೆ ಆಗದ ಕಾರಣ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಹೇಮಾವತಿ ಜಲಾಶಯದಲ್ಲಿ ಸಂಗ್ರಹವಿರುವ ನೀರನ್ನು ತಕ್ಷಣ ತುಮಕೂರು ಜಿಲ್ಲೆಗೆ ಹರಿಸಬೇಕು ಎಂದು ಮಾಜಿ ಸಚಿವ ಸೊಗಡು ಶಿವಣ್ಣ ಸರ್ಕಾರವನ್ನು ಒತ್ತಾಯಿಸಿದರು.

ಶುಕ್ರವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗೋರೂರು ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಜಿಲ್ಲೆಯ ಕುಡಿಯುವ ನೀರಿನ ಉದ್ದೇಶಕ್ಕಾಗಿ ಕೂಡಲೇ ಹರಿಸಲು ಕ್ರಮ ತೆಗೆದುಕೊಳ್ಳಬೇಕು ಎಂದು ನೀರಾವರಿ ಖಾತೆ ಸಚಿವರೂ ಆದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿರುವುದಾಗಿ ಹೇಳಿದರು.

ಇತ್ತೀಚೆಗೆ ತಾವು ನೀರಾವರಿ ತಜ್ಞರ ಜೊತೆ ಗೋರೂರು ಜಲಾಶಯಕ್ಕೆ ಭೇಟಿ ನೀಡಿದ್ದು, ಜಲಾಶಯದಲ್ಲಿ ಒಟ್ಟು 17.90 ಟಿಎಂಸಿ ನೀರು ಸಂಗ್ರಹವಿದೆ. ಇದರಲ್ಲಿ 5 ಟಿಎಂಸಿ ಡೆಡ್ ಸ್ಟೋರೇಜ್ ವಾಟರ್, ಉಳಿದ 12 ಟಿಎಂಸಿ



ನೀರನ್ನು ತುಮಕೂರು ಜಿಲ್ಲೆಗೆ ಕುಡಿಯುವ ನೀರಿನ ಉದ್ದೇಶಕ್ಕೆ ಹರಿಸಬೇಕು ಎಂದು ಒತ್ತಾಯಿಸಿದರು.

ಮಳೆ ಅಭಾವದ ಕಾರಣ ಜನ, ಜಾನುವಾರು, ಪ್ರಾಣಿಪಕ್ಷಿಗಳಿಗೂ ಕುಡಿಯುವ ನೀರಿನ ಸಮಸ್ಯೆಯಾಗಿದೆ. ಟಿಬಿಸಿ ನಾಲೆ ಮುಖಾಂತರ ತುರ್ತಾಗಿ ಹೇಮಾವತಿ ನೀರು ಹರಿಸಿ ಪರಿಸ್ಥಿತಿ ನಿಯಂತ್ರಿಸಬೇಕು. ಇಲ್ಲದಿದ್ದರೆ ಸಾರ್ವಜನಿಕರೊಂದಿಗೆ ಸೇರಿ ಸರ್ಕಾರದ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಹೇಳಿದರು.

ಕಾವೇರಿ ನೀರಾವರಿ ಟ್ರಿಬ್ಯೂನಲ್ ಆದೇಶದಂತೆ ತುಮಕೂರು ಜಿಲ್ಲೆಗೆ 25.03 ಟಿಎಂಸಿ ನೀರು ಹರಿಸಬೇಕು. ಆದರೆ ಆದೇಶ ನೀಡಿ 18 ವರ್ಷಗಳಾದರೂ ನಮ್ಮ ಪಾಲಿನ ನೀರನ್ನು ಸಮರ್ಪಕವಾಗಿ ಬಳಸಿಕೊಂಡಿಲ್ಲ. ಅಲ್ಲದೆ 18 ವರ್ಷ ಕಳೆದರೂ ತುಮಕೂರು ನಾಲಾವಲಯದ ಒಂದೇಒಂದು ಎಕರೆ ಜಮೀನನ್ನು ಅಚ್ಚುಕಟ್ಟು ಪ್ರದೇಶವೆಂದು ಘೋಷಿಸಿಲ್ಲ, ಅಲ್ಲದೆ ಈ ಬಗ್ಗೆ ಗೆಜೆಟ್‌ನಲ್ಲೂ ನೋಟಿಫಿಕೇಶನ್ ಆಗಿಲ್ಲ ಎಂದು ಸೊಗಡು ಶಿವಣ್ಣ ಹೇಳಿದರು.


ನಾಲ್ಕನೇ ಪುಟಕ್ಕೆ

# ಜೀವ ನುಂಗಿದ ಗ್ರಾಮೀಣ ಸಾಂಸ್ಕೃತಿಕ ಆಟ.... ಈ ಗಾಳಿಪಟ... ಇದಕ್ಕೆ ಬೇಕಾ ಕಾನೂನು..?





ನನ್ನ ಹಳೆಯ ದ್ವಿಚಕ್ರವಾಹನದಲ್ಲಿ ಹೆಲ್ಮೆಟ್ ಹಾಕಿಕೊಂಡೇ ಮಗಳನ್ನು ಕರೆತರಲು ಹೋಗುತ್ತಿದ್ದೆ. ಇನ್ನೇನು ಸ್ವಲ್ಪವೇ ದೂರದಲ್ಲಿತ್ತು ನಾನು ತಲುಪಬೇಕಾಗಿದ್ದ ಸ್ಥಳ.

ಇದ್ದಕ್ಕಿದ್ದಂತೆ ಕತ್ತಿನ ಬಳಿ ಏನೋ ಚುಚ್ಚಿದಂತಾಯಿತು. ನಿಧಾನವಾಗಿ ಗಾಡಿ ನಿಲ್ಲಿಸಬೇಕೆಂದು ಬ್ರೇಕ್ ಹಾಕಿದೆ. ತಕ್ಷಣ ರಕ್ತ ರಸ್ತೆಗೆ ಚಿಮ್ಮಿತು. ಬಟ್ಟೆಯ ಮೇಲೆಲ್ಲಾ ರಕ್ತ ಸುರಿಯುತ್ತಿತ್ತು. ಅದನ್ನು ನೋಡಿ ಭಯ ಮತ್ತು ಗಾಬರಿ ಒಟ್ಟಿಗೆ ಆಯಿತು. ಕತ್ತು ಸರಿಯಾಗಿ ನಿಲ್ಲುತ್ತಿಲ್ಲ, ಒಂದು ಕಡೆ ವಾಲುತ್ತಿದೆ. ಅಯ್ಯೋ ಇದೇನಾಯಿತು ಎಂದು ಜೋರಾಗಿ ಕೂಗಿದೆ. ಯಾರು ನನ್ನತ್ತ ನೋಡುತ್ತಿಲ್ಲ. ಏಕೆಂದರೆ ನನ್ನ ಧ್ವನಿ ಹೊರಗೆ ಹೊರಡುತ್ತಲೇ ಇಲ್ಲ. ಗಂಟಲು ಬಿದ್ದು ಹೋಗಿದೆ. ಶಬ್ದ ಅವರಿಗೆ ಕೇಳಿಸುತ್ತಲೇ ಇಲ್ಲ. ತಲೆ ಸುತ್ತಿ ಬಂದಂತಾಯಿತು. ಕಣ್ಣು ಮಂಜಾಯಿತು. ಉಸಿರು ನಿಂತಂತಾಯಿತು. ಕೆಳಕ್ಕೆ ಬೀಳತೊಡಗಿದೆ. ಈಗ ಜನ ನನ್ನತ್ತ ಬರತೊಡಗಿದರು. ಮನೆಗೆ ವಿಷಯ ತಿಳಿಸಲು ಜೇಬಿನಲ್ಲಿದ್ದ ಮೊಬೈಲ್ ಗೆ ಕೈ ಹಾಕಿದೆ, ಸಿಗುತ್ತಿಲ್ಲ. ದಿಢೀರನೆ ರಸ್ತೆಯ ಕಲ್ಲಿನ ಮೇಲೆ ಬಿದ್ದೆ. ಮುಂದೇನಾಯಿತೋ ನನಗೆ ಗೊತ್ತಿಲ್ಲ. ಬಹುಶಃ ನಿಮಗೆ ಇಷ್ಟು ಹೊತ್ತಿಗೆ ಗೊತ್ತಾಗಿರಬಹುದು. ನನ್ನ ಪ್ರಾಣಪಕ್ಷಿ ಹಾರಿ

ಹೋಗಿರಬಹುದು ಎಂದು ಭಾವಿಸುತ್ತೇನೆ. ಮಾಂಝಾದಾರ ನನ್ನ ಜೀವ ನುಂಗಿತು......

ನಾನು ಶ್ರೀಧರ ನಾಯಕ. ಒಂದು ಅಕ್ಕಿ ಗಿರಣಿಯಲ್ಲಿ ಕಾರ್ಮಿಕನಾಗಿ ಕೆಲಸ ಮಾಡುತ್ತಿದ್ದೆ. ತಿಂಗಳಿಗೆ 18000 ರೂಪಾಯಿಯ ಸಂಬಳ. ಒಂದು ಸಣ್ಣ ಬಾಡಿಗೆ ಮನೆಯಲ್ಲಿ ವಾಸ. ಹೆಂಡತಿ ಮತ್ತು ಪಿಯುಸಿ ಓದುತ್ತಿರುವ ನನ್ನ ಮುದ್ದಿನ ಮಗಳೊಂದಿಗೆ ಆರಾಮಾಗಿ ಇದ್ದೆ. ಬದುಕಿನ ಏಳುಬೀಳುಗಳ ನಡುವೆ ಹೇಗೋ ಜೀವನ ಸಾಗುತ್ತಿತ್ತು. ನನ್ನ ಪತ್ನಿಯೂ ಪರಿಸ್ಥಿತಿ ಅರಿತು ಹೊಂದಾಣಿಕೆ ಮಾಡಿಕೊಂಡು ತುಂಬಾ ಒಳ್ಳೆಯ ಜೀವನ ಸಂಗಾತಿಯಾಗಿದ್ದಳು.

ನನ್ನ ಮಗಳು ಈ ಬಾರಿ ವಿಜ್ಞಾನ ವಿಷಯದಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದಾಳೆ. ಚಿಕ್ಕ ಮಗುವಾಗಿದ್ದಾಗಿನಿಂದಲೂ ಅತ್ಯಂತ ಬುದ್ಧಿವಂತೆ. ತಾನು ಓದಿದ ಎಲ್ಲಾ ಶಾಲಾ ತರಗತಿಗಳಲ್ಲೂ ಈಕೆಗೇ ಮೊದಲ ಸ್ಥಾನ. ಅವಳಿಗೆ ಡಾಕ್ಟರ್ ಆಗಬೇಕೆಂಬ ಬಹುದೊಡ್ಡ ಕನಸಿದೆ. ನಾವಂತೂ ಕಡುಬಡವರು. ಸರ್ಕಾರಿ ಶಾಲೆಯಲ್ಲಿ ಓದಿ ಮುಂದೆ ಸರ್ಕಾರಿ ಕೋಟಾದಲ್ಲಿಯೇ ಮೆಡಿಕಲ್ ಸೀಟು ಸಿಕ್ಕಿದರೆ ಹೇಗೋ ಬ್ಯಾಂಕಿನ ಹಣಕಾಸು ನೆರವು ಪಡೆದು ಡಾಕ್ಟರ್ ಓದಬೇಕೆಂದು ಆಸೆಪಟ್ಟಿದ್ದಾಳೆ.

ನೀಟ್ ಪರೀಕ್ಷೆಯ ತರಬೇತಿಗಾಗಿ ನಮ್ಮ ಮನೆಯಿಂದ ಐದು ಕಿಲೋಮೀಟರ್ ದೂರದ ತಾಲ್ಲೂಕು ಮುಖ್ಯ ಕೇಂದ್ರದಲ್ಲಿ ಉಚಿತ ತರಬೇತಿ ಪಡೆಯುತ್ತಿದ್ದಾಳೆ.

ಇವತ್ತು ಭಾನುವಾರ, ಆ ಉಚಿತ ನೀಟ್ ತರಬೇತಿ ಬೆಳಗ್ಗೆ 8 ಗಂಟೆಯಿಂದ 11 ಗಂಟೆಯವರೆಗೆ ಇತ್ತು. ಆಕೆ ಬೆಳಗ್ಗೆ ನಡೆದೇ ಹೋಗಿದ್ದಳು. ಈಗ ನಾನು ಆಕೆಯನ್ನು ಕರೆದುಕೊಂಡು ಬರಲು ನನ್ನ ಹಳೆಯ ಸ್ಕೂಟರಿನಲ್ಲಿ ಹೋಗುತ್ತಿದ್ದೆ. ಇವತ್ತು ಇನ್ನೊಂದು ವಿಶೇಷವಿದೆ. ಇಂದು ನನ್ನ ಮುದ್ದಿನ ಮಗಳ ಹುಟ್ಟುಹಬ್ಬ.

ಆಕೆ ಸುಮಾರು ಎರಡು ವರ್ಷದಿಂದ ನನ್ನನ್ನು ಒಂದು ಒಳ್ಳೆಯ ಮೊಬೈಲ್ಗಾಗಿ ಕಾಡಿ ಬೇಡುತ್ತಿದ್ದಳು. ಬಡವನಾದ ನನಗೆ ಉತ್ತಮ ಗುಣಮಟ್ಟದ ಮೊಬೈಲ್ ಕೊಡಿಸಲು ಸಾಧ್ಯವಾಗಿರಲಿಲ್ಲ. ಆದರೆ ಈಗ ಆಕೆ ಮೆಡಿಕಲ್ ಪ್ರವೇಶ ಪರೀಕ್ಷೆ ಓದಲು ಸಿದ್ಧತೆ ಮಾಡಿಕೊಳ್ಳುತ್ತಿರುವುದರಿಂದ ಒಂದು ಒಳ್ಳೆಯ ಸ್ಮಾರ್ಟ್ ಫೋನ್ ಕೊಡಿಸಬೇಕೆಂದು ಆಗೋ ಹೀಗೋ ಕೂಡಿಟ್ಟ ಹಣವನ್ನು, ಜೊತೆಗೆ ನನ್ನ ಪತ್ನಿಯ ಉಳಿತಾಯದ ಹಣವನ್ನೂ ಎಲ್ಲ ಸೇರಿಸಿ ಸುಮಾರು 20000 ರೂಪಾಯಿ ಬೆಲೆಯ ಮೊಬೈಲ್ ಕೊಡಿಸಲು ನಿರ್ಧರಿಸಿದೆ.

ಅವಳಿಗೆ ಒಂದು ರೀತಿ ಸರ್ಪ್ರೈಸ್ ಇರಲೆಂದು ಮೊದಲೇ ಆಕೆಗೆ ಹೇಳದೆ ಆಕೆಯನ್ನು ಟ್ಯೂಷನ್ ನಿಂದ ನೇರವಾಗಿ ಮೊಬೈಲ್ ಅಂಗಡಿಗೆ ಕರೆದುಕೊಂಡು ಹೋಗಿ ಕೊಡಿಸುವ ಉತ್ಸಾಹದಲ್ಲಿ ಆ ಕಡೆ ಹೋಗುತ್ತಿದ್ದೆ. ಆದರೆ ದುರಾದೃಷ್ಟ ನನ್ನದೋ, ಮಗಳದೋ, ನನ್ನ ಪತ್ನಿಯದೋ ಅರ್ಥವಾಗುತ್ತಿಲ್ಲ. ನಾನಂತೂ ಈ ಭೂಮಿಯಿಂದ ಹೊರಟೆ. ನನ್ನ ಬರುವಿಕೆಗೆ ಅಲ್ಲಿ ಮಗಳು ಕಾಯುತ್ತಿದ್ದರೆ, ಮನೆಯಲ್ಲಿ ಹೆಂಡತಿ ಕಾಯುತ್ತಿದ್ದಾಳೆ, ನಾನಂತೂ ಬರುವುದಿಲ್ಲ. ನೀವೇ ವಿಷಯ ಮುಟ್ಟಿಸಬೇಕು. ಮುಂದೆ ಏನಾಗುತ್ತೋ ನಿಮಗೆ ಅರ್ಥವಾಗಬಹುದು.

ಗಾಳಿಪಟ ಹಾರಿಸುವುದು ಒಂದು ಗ್ರಾಮೀಣ ಸಾಂಸ್ಕೃತಿಕ ಆಟ. ಈ ಆಟ ಈ ವರ್ಷ ನಮ್ಮ ದೇಶದಲ್ಲಿ ಸುಮಾರು ಹತ್ತಕ್ಕೂ ಹೆಚ್ಚು ಜನರನ್ನು ಬಲಿ ಪಡೆದರೆ, ಮತ್ತೆ ಕೆಲವರು ತೀವ್ರ ಸ್ವರೂಪದ ಗಾಯಾಳುಗಳಾಗಿದ್ದಾರೆ. ದೇಶದ ಜನಸಂಖ್ಯೆಗೆ ಹೋಲಿಸಿದರೆ ಈ ಸಾವುಗಳು ಕಡಿಮೆಯೇ ಇರಬಹುದು. ಆದರೆ ಈ ಸಾವುಗಳು ಮಾತ್ರ ತೀರಾ ಅನಾವಶ್ಯಕ, ಬೇಜವಾಬ್ದಾರಿ ನಡೆಯಿಂದ ಆಗುತ್ತಿದೆ ಮತ್ತು ಇದನ್ನು ನಿರ್ಲಕ್ಷಿಸಿದರೆ ಮುಂದಿನ ವರ್ಷಗಳಲ್ಲಿ ಮತ್ತಷ್ಟು ಹೆಚ್ಚಾಗಬಹುದು.

ಸರ್ಕಾರಗಳು ಕೂಡಲೇ ಎಚ್ಚೆತ್ತುಕೊಂಡು ಗಾಳಿಪಟ ಹಾರಿಸುವಾಗ ಈ ಆಟಕ್ಕೆ ನೀತಿ ನಿಯಮಗಳನ್ನು ರೂಪಿಸಲೇಬೇಕಿದೆ. ಮುಖ್ಯವಾಗಿ ಒಂದು ನಿರ್ದಿಷ್ಟ ಸ್ಥಳದಲ್ಲಿ, ನಿರ್ದಿಷ್ಟ ಸಮಯದಲ್ಲಿ ಮಾತ್ರ ಗಾಳಿಪಟ ಹಾರಿಸುವಂತಿರಬೇಕು. ಹೆಚ್ಚಾಗಿ ಬಯಲು ಪ್ರದೇಶದಲ್ಲಿಯೇ ಗಾಳಿಪಟ ಹಾರಿಸಬೇಕು. ಜನವಸತಿ ಪ್ರದೇಶದಲ್ಲಿ, ರಸ್ತೆ ಬದಿಯಲ್ಲಿ ಅದನ್ನು ಸಂಪೂರ್ಣ ನಿಷೇಧಿಸಬೇಕು. ಮನೆಯ ಮಹಡಿಯ ಮೇಲೆಯೂ ಹಾರಿಸಬಾರದು.

ಅದಕ್ಕೆ ಉಪಯೋಗಿಸುವ ದಾರವನ್ನು, ಅದರ ಗುಣಮಟ್ಟವನ್ನು ಅಪಾಯಕಾರಿ ಇಲ್ಲದಂತೆ ನೋಡಿಕೊಳ್ಳಬೇಕು. ವರ್ಷದ ಎಲ್ಲಾ ಕಾಲವೂ ಹಾರಿಸಲು ನಿಷೇಧ ಸೇರಿ ಕೆಲವು ಸಂದರ್ಭದಲ್ಲಿ ಮಾತ್ರ ಅನುಮತಿ ನೀಡಬೇಕು. ವಿದ್ಯುತ್ ಕಂಬಗಳ ಬಳಿ, ಜನನಿಬಿಡ ಪ್ರದೇಶದಲ್ಲಿ ಸಂಪೂರ್ಣ ನಿಷೇಧ ಇರಬೇಕು. ಗಾಳಿಪಟಗಳ ಗುಣಮಟ್ಟವನ್ನೂ

ಪರೀಕ್ಷಿಸಬೇಕು. ಚಿಕ್ಕ ಮಕ್ಕಳಿಗೆ ಅನುಮತಿ ನೀಡಲೇಬಾರದು. ಗಾಳಿಪಟ ಸ್ಪರ್ಧೆ ಅಥವಾ ಗುಂಪು ಹಾರಿಸುವಿಕೆಯಲ್ಲಿ ಪೊಲೀಸರ ಅನುಮತಿ ಪಡೆಯಲೇಬೇಕು. ಮಧ್ಯದಲ್ಲಿಯೇ ತುಂಡಾದ ಅಥವಾ ಹರಿದ ಗಾಳಿಪಟವನ್ನು ಸಂಗ್ರಹಿಸಿ ಅದನ್ನು ನಾಶಪಡಿಸಬೇಕು. ರಸ್ತೆ ಬದಿ ಯಾವುದೇ ಕಾರಣಕ್ಕೂ ಗಾಳಿಪಟ ಹಾರಿಸುವಂತಿಲ್ಲ. ಇದಲ್ಲದೆ ಇನ್ನೂ ಪರಿಣಿತರೊಂದಿಗೆ ಚರ್ಚಿಸಿ ಗಾಳಿಪಟದಿಂದ ಆಗುತ್ತಿರುವ ಅಥವಾ ಮಂಜಾದಾರದಿಂದ ಆಗುತ್ತಿರುವ ಅನಾಹುತಗಳನ್ನು ತಪ್ಪಿಸಬೇಕು. ಇಲ್ಲದಿದ್ದರೆ ತುಂಬಾ ಅನಾಹುತವಾಗಬಹುದು. ದಯವಿಟ್ಟು ಈ ಬಗ್ಗೆ ಸಾರ್ವಜನಿಕ ಅಭಿಪ್ರಾಯ ಬಲಗೊಳ್ಳುವಂತೆ ಮತ್ತು ಸರ್ಕಾರದ ಗಮನ ಸೆಳೆಯುವಂತೆ ಜಾಗೃತಿ ಮೂಡಿಸೋಣ.

# ಈ ರೀತಿಯ ಜನರಿಂದ ದೂರವಿದ್ದಷ್ಟು ಒಳ್ಳೆಯದು



ಜೀವನಕ್ಕೆಸಂಬಂಧಿಸಿದ ಸಾಕಷ್ಟು ವಿಚಾರಗಳ ಬಗ್ಗೆ ಹೇಳಿದ್ದಾರೆ, ಅದೇ ರೀತಿ ಇತರರಿಗೆ ಸಹಾಯ ಮಾಡಬೇಕು ಎಂಬುದನ್ನೂ ಹೇಳಿದ್ದಾರೆ. ಇದು ಮಾತ್ರವಲ್ಲದೆ ಈ ಕೆಲವೊಂದಷ್ಟು ಜನರಿಗೆ ಯಾವುದೇ ಕಾರಣಕ್ಕೂ ಸಹಾಯ ಮಾಡಬಾರದು, ಅವರಿಂದ ದೂರವಿದ್ದಷ್ಟು ಒಳ್ಳೆಯದು ಎಂಬ ವಿಚಾರವನ್ನು ತಿಳಿಸಿದ್ದಾರೆ. ಹಾಗಿದ್ರೆ ಯಾರಿಂದ ದೂರವಿರಬೇಕು ಎಂಬುದರ ಸಂಕ್ಷಿಪ್ತ ಮಾಹಿತಿಯನ್ನು ತಿಳಿಯಿರಿ.

**ಸಹಾಯ ಮಾಡುವುದು ಒಳ್ಳೆಯ ಗುಣ.**

ಹೌದು ಕಷ್ಟದಲ್ಲಿರುವವರಿಗೆ ಸಹಾಯ ಮಾಡುವುದು ಮಾನವೀಯತೆ. ಆದರೆ ಇಂತಹ ಕೆಲವೊಂದಿಷ್ಟು ಜನರಿಗೆ ಯಾವುದೇ ಕಾರಣಕ್ಕೂ ಸಹಾಯ ಮಾಡಬಾರದು ಅಂತಹ ಜನರಿಂದ ಸಾಧ್ಯವಾದಷ್ಟು ಅಂತರವನ್ನು ಕಾಯ್ದುಕೊಳ್ಳಬೇಕು ಎಂದು ಆಚಾರ್ಯ ಚಾಣಕ್ಯರು ಸಲಹೆ ನೀಡಿದ್ದಾರೆ. ಚಾಣಕ್ಯರು ಹೇಳುವಂತೆ ಯಾವ ರೀತಿಯ ಜನರಿಗೆ ಸಹಾಯ ಮಾಡಬಾರದು, ಅಂತಹ ಜನರಿಂದ ಯಾವ ಕಾರಣಕ್ಕಾಗಿ ದೂರವಿರಬೇಕು ಎಂಬುದರ ಸಂಕ್ಷಿಪ್ತ ಮಾಹಿತಿಯನ್ನು ತಿಳಿದುಕೊಳ್ಳಿ

**ಇಂತಹ ಜನರಿಗೆ ಸಹಾಯ ಮಾಡಬಾರದು:**

**ಮೂರ್ಖ ವ್ಯಕ್ತಿ:** ಆಚಾರ್ಯ ಚಾಣಕ್ಯರು ಮೂರ್ಖ ವ್ಯಕ್ತಿಯಿಂದ ಆದಷ್ಟು ದೂರವಿರಬೇಕು ಎಂದು ಸಲಹೆ ನೀಡಿದ್ದಾರೆ. ಏಕೆಂದರೆ ಮೂರ್ಖನಿಗೆ ನಿಮ್ಮ ಸಹಾಯದ ಮಹತ್ವ ಅರ್ಥವಾಗುವುದಿಲ್ಲ, ಇಂತಹವರಿಗೆ ಉಪಕಾರ ಮಾಡುವುದೇ ನಿಷ್ಪ್ರಯೋಜಕ. ಆದ್ದರಿಂದ ಇಂತಹ ಜನರಿಂದ ದೂರವಿರುವುದೇ ತುಂಬಾ ಒಳ್ಳೆಯದು.

**ಕೆಟ್ಟ ಸ್ವಭಾವದ ವ್ಯಕ್ತಿ:** ಕೆಟ್ಟ ಸ್ವಭಾವದ ಯಾರಾದರೂ ನಿಮಗೆ ತಿಳಿದಿದ್ದರೆ, ಅವರಿಂದ ದೂರವಿರುವುದು ತುಂಬಾ ಒಳ್ಳೆಯದು. ಅಂತಹ ಜನರಿಗೆ ಸಹಾಯ ಮಾಡುವುದು ಅಥವಾ ಒಳ್ಳೆಯದನ್ನು ಮಾಡುವುದು ಸಹ ಹಾನಿಯನ್ನುಂಟುಮಾಡುತ್ತದೆ. ಅಂತಹ ಜನರೊಂದಿಗೆ ಸಂಪರ್ಕದಲ್ಲಿದ್ದರೆ ಸಮಾಜ ಮತ್ತು ಕುಟುಂಬ ವರ್ಗದಲ್ಲಿ ನಿಮ್ಮ ಗೌರವ ಹಾಳಾಗುತ್ತದೆ. ಇದು ಅವಮಾನಕ್ಕೆ ಸಹ ಕಾರಣವಾಗಬಹುದು. ಜೊತೆಗೆ ಅಂತಹ ಜನರ ಸಹವಾಸ ಮಾಡಿದರೇ ನೀವು ಕೂಡ ಕೆಟ್ಟ ಬುದ್ಧಿಯನ್ನು ಕಲಿಯುವ ಸಾಧ್ಯತೆ ಇದೆ. ಇದೇ ಕಾರಣಕ್ಕೆ ಕೆಟ್ಟ ಸ್ವಭಾವದ ಜನರಿಂದ ದೂರವಿರಬೇಕು ಎಂದು ಆಚಾರ್ಯ ಚಾಣಕ್ಯರು ಹೇಳುತ್ತಾರೆ..

**ಅನಗತ್ಯವಾಗಿ ದುಃಖಿತನಾಗಿರುವ ವ್ಯಕ್ತಿ:** ತಮ್ಮ ಜೀವನದಲ್ಲಿ ಅತೃಪ್ತರಾಗಿರುವ ಮತ್ತು ನಿರಂತರವಾಗಿ ದುಃಖಿತನಾಗಿರುವ ವ್ಯಕ್ತಿ ಇತರರ ಪ್ರಗತಿಯನ್ನು ನೋಡಿ ಅಸೂಯೆ ಪಡುತ್ತಾನೆ. ಆದ್ದರಿಂದ ಇಂತಹ ಸ್ವಭಾವದ ವ್ಯಕ್ತಿಗಳಿಂದ ದೂರವಿರಿ ಎಂದು ಆಚಾರ್ಯ ಚಾಣಕ್ಯರು ಸಲಹೆ ನೀಡಿದ್ದಾರೆ. ಅವರು ಇತರರ ಸಂತೋಷವನ್ನು ಅಸೂಯೆಪಡುತ್ತಾರೆ ಮತ್ತು ಶಪಿಸುತ್ತಾರೆ. ಹೀಗಾಗಿ, ಅಸೂಯೆ ಭಾವನೆಗಳನ್ನು ಹೊಂದಿರುವ ಮತ್ತು ಅತೃಪ್ತರಾಗಿರುವವರಿಂದ ದೂರವಿರುವುದು ನಮಗೆ ಒಳ್ಳೆಯದು.

**ಕೋಪಗೊಂಡ ಅಥವಾ ಮುಂಗೋಪದ ಜನರು:** ಆಚಾರ್ಯ ಚಾಣಕ್ಯರು ಕೋಪದ ಸ್ವಭಾವ ಹೊಂದಿರುವ ವ್ಯಕ್ತಿಯನ್ನು ಎಂದಿಗೂ ಹತ್ತಿರ ಸೇರಿಸಬಾರದು ಎಂದು ಸಲಹೆ ನೀಡಿದ್ದಾರೆ. ಮನುಷ್ಯನ ದೊಡ್ಡ ಶತ್ರು ಕೋಪ. ಕೋಪವು ವ್ಯಕ್ತಿಯ ತರ್ಕಿಸುವ ಮತ್ತು ಗ್ರಹಿಸುವ ಸಾಮರ್ಥ್ಯವನ್ನು ದುರ್ಬಲಗೊಳಿಸುತ್ತದೆ. ಕೋಪಗೊಂಡ ವ್ಯಕ್ತಿಯು ತನ್ನನ್ನು ಮತ್ತು ಇತರರನ್ನು ನೋಯಿಸಿಕೊಳ್ಳುತ್ತಾನೆ. ಈ ವ್ಯಕ್ತಿ ವಿರೋಧಿಗಳಿಗಿಂತ ಹೆಚ್ಚು ಅಪಾಯಕಾರಿ ಆದ್ದರಿಂದ ಇಂತಹ ವ್ಯಕ್ತಿಗಳಿಂದ ದೂರವಿದ್ದಷ್ಟು ಒಳ್ಳೆಯದು.

**ಮಾದಕ ವ್ಯಸನಿಗಳು:** ಮಾದಕ ವ್ಯಸನಿಗಳಿಗೆ ಸಹಾಯ ಮಾಡದಂತೆ ಆಚಾರ್ಯ ಚಾಣಕ್ಯ ಸಲಹೆ ನೀಡಿದ್ದಾರೆ. ಅಂತಹ ಜನರು ಎಂದಾದರೂ ಸಹಾಯ ಕೇಳಿದರೆ, ನಿರಾಕರಿಸುವುದು ಉತ್ತಮ. ಏಕೆಂದರೆ ಅಂತಹ ಜನರು, ಮಾದಕತೆಯ ಪ್ರಭಾವದಲ್ಲಿ, ಉಳಿದೆಲ್ಲವನ್ನೂ ಮರೆತು ನೀರಿನಂತೆ ಹಣವನ್ನು ಖರ್ಚು ಮಾಡುತ್ತಾರೆ. ಅಲ್ಲದೆ ಇವರಿಂದ ಇತರರಿಗೆ ಹಾನಿಯೇ ಹೆಚ್ಚು. ಆದ್ದರಿಂದ ಅಂತಹ ಜನರಿಗೆ ಎಂದಿಗೂ ಸಹಾಯ ಮಾಡಬಾರದು.

# ಕೆಂದಲೆ ರಣ ಹದ್ದಿನ ರೋಚಕ ಪ್ರಪಂಚ !

ಕಳೆದ ವರ್ಷ ಇದೇ ತಿಂಗಳ ಮೊದಲ ವಾರದಲ್ಲಿ ನಾಗರಹೊಳೆ ಅಭಯಾರಣ್ಯದಲ್ಲಿ ಹಕ್ಕಿಗಣತಿ ಕಾರ್ಯದಲ್ಲಿ ಭಾಗವಹಿಸುವ ಅವಕಾಶ ನನಗೂ ಒದಗಿ ಬಂದಿತ್ತು. ನಾಗರಹೊಳೆ ಎಂದರೆ ಹುಲಿಗಳು ಮತ್ತು ಆನೆಗಳಿಗೆ ಹೆಸರಾದ ಜಾಗ. ಇಡೀ ದೇಶದಲ್ಲೇ ಹುಲಿಗಳು ಹೆಚ್ಚಿನ ಸಂಖ್ಯೆಯಲ್ಲಿರುವ ಕಾಡು ಎಂದು ಅಲ್ಲಿನ ಅರಣ್ಯಾಧಿಕಾರಿಗಳು ಹೇಳಿಕೊಳ್ಳುತ್ತಾರೆ. ಅಂತೆಯೇ ಹೆಚ್ಚಿನ ಸಂಖ್ಯೆಯಲ್ಲಿ ಆನೆಗಳು ಇರುವ ಕಾಡೂ ಹೌದು. ಅಂತಹ ಕಾಡಿನಲ್ಲಿ ಹಕ್ಕಿಗಣತಿ ಮಾಡುವುದು ಏಕೆ ಎಂದು ನೀವು ಕೇಳಬಹುದು. ಪ್ರಾಣಿಗಳು ಸ್ವಚ್ಛಂದವಾಗಿ ವಿಹರಿಸುವ ಕಾಡಿನಲ್ಲಿ ಹಕ್ಕಿಗಳೂ ಯಥೇಚ್ಛವಾಗಿ ಇರಬಹುದು, ಅದನ್ನು ಗುರುತಿಸುವ ಕಾರ್ಯ ಆಗಬೇಕು ಎಂಬುದು ಅರಣ್ಯ ಇಲಾಖೆಯ ಆಶಯವಾಗಿತ್ತು.



ನಾಗರಹೊಳೆಗೆ ಪ್ರವೇಶ ಮಾಡುವ ವೀರನಹೊಸಹಳ್ಳಿ ಎಂಬ ವಲಯದಲ್ಲಿ ನಮಗೆ ಹಕ್ಕಿಗಣತಿ ಮಾಡಿ ವರದಿ ಮಾಡಲು ಅವಕಾಶ ನೀಡಲಾಗಿತ್ತು. ಬಯಲುಸೀಮೆಯ ಒಣ ಮತ್ತು ಎಲೆಉದುರಿಸುವ ಕುರುಚಲು ಕಾಡು ಅದಾಗಿತ್ತು. ಅರಣ್ಯ ಸಿಬ್ಬಂದಿಯ ಗಸ್ತು ವಾಹನಗಳು ಓಡಾಡಲು ಮಾಡಲಾದ ರಸ್ತೆಗಳಲ್ಲಿ ನಡೆದುಕೊಂಡು ಹಕ್ಕಿಗಳನ್ನು ಗುರುತಿಸಿ ದಾಖಲಿಸುವ ಕೆಲಸ ನಮ್ಮದಾಗಿತ್ತು. ಹಕ್ಕಿಗಳನ್ನು ಗುರುತಿಸಿ ಅವುಗಳ ಸಂಖ್ಯೆಯ ಜೊತೆಗೆ ಇಬರ್ಡ್ ಎಂಬ ಮೊಬೈಲ್ ಆಪ್ ನಲ್ಲಿ ಹಕ್ಕಿಗಳ ಮಾಹಿತಿ ದಾಖಲೆ ಮಾಡುತ್ತಾ ಬಿಸಿಲೇರುವ ಹೊತ್ತಿಗೆ ಕಾಡಿನ ನಡುವೆ ಇದ್ದ ಸಣ್ಣ ಕೆರೆಯೊಂದಕ್ಕೆ ಬಂದು ತಲುಪಿದೆವು.

ಅಲ್ಲೇ ಕುಳಿತು ದಣಿವಾರಿಸಿಕೊಳ್ಳುತ್ತಾ ತೆಗೆದುಕೊಂಡು ಬಂದ ಬೆಳಗ್ಗಿನ ಉಪಾಹಾರವನ್ನು ತಿಂದೆವು. ಕೆರೆಯ ಸುತ್ತಲೂ ಸ್ವಲ್ಪ ದೊಡ್ಡ ಮರಗಳು ಇದ್ದು ಅವುಗಳಲ್ಲಿ ಅನೇಕ ಕಾಡು ಹಣ್ಣುಗಳು ಇದ್ದುದರಿಂದ ಹಕ್ಕಿಗಳ ಕಲರವ ಸ್ವಲ್ಪ ಹೆಚ್ಚಾಗಿತ್ತು. ಅವುಗಳನ್ನು ಗಮನಿಸುತ್ತಿದ್ದಾಗ ನಮ್ಮ ಜೊತೆಗಿದ್ದ ದಾಸಪ್ಪ ಎಂಬ ಅರಣ್ಯ ಸಿಬ್ಬಂದಿ ಆಕಾಶದಲ್ಲಿ ಯಾವುದೋ ಹದ್ದು ಹಾರ್ತಾ ಐತೆ ನೋಡಿ ಸಾರ್ ಎಂದರು. ನಮ್ಮ ಬಳಿ ಇದ್ದ ಬೈನಾಕುಲರ್ ನಿಂದ ನೋಡಿದರೆ ಅದು ಒಂದು ರಣಹದ್ದು ಎಂಬುದು ಸ್ಪಷ್ಟವಾಯಿತು. ಕೆರೆಯ ಮೇಲೆ ಎತ್ತರದಲ್ಲಿ ಹಾರಾಡಿದ ಅದನ್ನು ಕಣ್ತುಂಬಿಕೊಂಡು, ನಮ್ಮ ಬಳಿ ಇದ್ದ ಹಕ್ಕಿ ಪುಸ್ತಕ ತೆಗೆದು ಇದು ಯಾವ ರಣಹದ್ದು ಎಂದು ಹುಡುಕಿದೆವು. ನಮ್ಮ ಜೊತೆಗಿದ್ದ ದಾಸಪ್ಪ, ವಸಂತ ಮತ್ತು ನಿಂಗಣ್ಣ ಅರಣ್ಯ ಇಲಾಖೆಯಲ್ಲಿ ವಾಚರ್ ಕೆಲಸ ಮಾಡುವವರು. ಅವರು ಹಿಂದೆ ನಾಗರಹೊಳೆ ಕಾಡಿನೊಳಗೆ ವಾಸವಾಗಿದ್ದ ಜೇನುಕುರುಬ ಮತ್ತು ಕಾಡುಕುರುಬ ಸಮುದಾಯಕ್ಕೆ ಸೇರಿದವರು. ಅವರ ಕಾಡಿನ ಬಗೆಗಿನ ತಿಳುವಳಿಕೆ ಅಗಾಧ. ಕೇವಲ ಪರಿಮಳ ಅಥವಾ ಶಬ್ದದಿಂದಲೇ ಇಂತಹ ಪ್ರಾಣಿ ಇದೆ, ಇಂತಹ ಮರ ಇದೆ ಎಂದು ಹೇಳಬಲ್ಲವರು ಅವರು. ಕೆರೆಯ ಮೇಲೆ ಹಾರಿದ ರಣಹದ್ದುಗಳನ್ನು ನೋಡಿದ್ದೀರಾ ಎಂದು ಕೇಳಿದಾಗ ಅವರು ಹೇಳಿದ ಮಾಹಿತಿ ಹೀಗಿತ್ತು. ಈ ಕಾಡಿನಲ್ಲಿ ಹುಲಿಗಳು ಬಹಳ ಇವೆ. ಅವುಗಳು ಜಿಂಕೆಯಂತಹ ಪ್ರಾಣಿಯನ್ನು ಬೇಟೆಯಾಡಿ ತಿಂದನಂತರ ನೀರು ಕುಡಿದು ದಣಿವಾರಿಸಿಕೊಳ್ಳುತ್ತವೆ. ಹುಲಿ ತಿಂದು ಉಳಿದ ಶವವನ್ನು ಹುಡುಕುತ್ತಾ ಇವುಗಳು ಹಾರಾಡುತ್ತವೆ. ಶವ ಕಾಣಿಸಿದರೆ ಅಲ್ಲಿ ಹೋಗಿ ಹೆಣದ ಮೂಳೆ ಒಂದನ್ನು ಬಿಟ್ಟು ಉಳಿದುದನ್ನೆಲ್ಲ ಹರಿದು ತಿನ್ನುತ್ತವೆ. ಅಂತಹ ಜಾಗಗಳಲ್ಲಿ ಒಂದಕ್ಕಿಂತ ಹೆಚ್ಚು ರಣಹದ್ದುಗಳು ಇರ್ತವೆ ಸಾರ್. ಹುಲಿ ತಿಂದು ಬಿಟ್ಟ ಪ್ರಾಣಿಯ ಶವ ಮಾತ್ರವಲ್ಲ, ಸತ್ತ ಯಾವುದೇ ಪ್ರಾಣಿಯ ಶವ ಸಿಕ್ಕರೂ ಇವುಗಳು ಬಿಡುವುದಿಲ್ಲ. ಎತ್ತರದ ಮರಗಳ ಮೇಲೆ ದೊಡ್ಡ ಅಟ್ಟಳಿಗೆ ತರಹ ಮಾಡಿ ಅಲ್ಲಿ ಮೊಟ್ಟೆ ಇಟ್ಟು ಮರಿಮಾಡುತ್ತವೆ. ಗಾತ್ರದಲ್ಲಿ ಸುಮಾರು ನವಿಲಿನಷ್ಟು ದೊಡ್ಡದಿರುತ್ತದೆ ಎಂದೆಲ್ಲ ತಮಗೆ ತಿಳಿದ ಮಾಹಿತಿಯನ್ನು ಹಂಚಿಕೊಂಡರು.

ಸತ್ತ ಪ್ರಾಣಿಗಳ ಶವವನ್ನು ತಿಂದು ಮುಗಿಸುವ ಈ ಹಕ್ಕಿಗಳು ಊರಿನಲ್ಲಿ ಇಲ್ಲವೆನ್ನುವಷ್ಟು ಅಪರೂಪ. ಹಾಗೊಂದು ಪ್ರಾಣಿ ಸತ್ತರೂ ವಾಸನೆ ಬರುವ ಮತ್ತು ರೋಗಗಳು ಬರಬಹುದು ಎಂಬ ಕಾರಣಕ್ಕೆ ನಾವು ಹಳ್ಳ ತೆಗೆದು ಹೂಳುವುದರಿಂದ ಈ ಹಕ್ಕಿಗಳಿಗೆ ಸತ್ತ ಪ್ರಾಣಿಗಳ ಶವ ಸಿಗುವುದಿಲ್ಲ. ರಸ್ತೆ ಅಪಘಾತದಲ್ಲಿ ಸಾಯುವ ಸಣ್ಣ ಪುಟ್ಟ ಪ್ರಾಣಿಗಳನ್ನು ಕಾಗೆ, ನಾಯಿ ಮೊದಲಾದವು ತಿಂದು ಮುಗಿಸುವುದರಿಂದ ರಣಹದ್ದುಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದೆ. ಹಾಗಾಗಿ ರಣಹದ್ದುಗಳನ್ನು ಅಳಿವಿನ ಅಂಚಿನಲ್ಲಿರುವ ಜೀವಿಗಳು ಎಂದು ಪರಿಗಣಿಸಲಾಗಿದೆ. ನಾಗರಹೊಳೆಯಂತಹ ಅಭಯಾರಣ್ಯ ಹುಲಿಗಳಿಗಾಗಿ ಮಾಡಿದರೂ ಅವುಗಳ ಕಾರಣದಿಂದ ರಣಹದ್ದುಗಳು ಉಳಿದಿರುವುದು ಸಂತೋಷದ ಸಂಗತಿ. ಪರಿಸರದಲ್ಲಿರುವ ಅಂತರ್ ಸಂಬಂಧ ಮತ್ತು ಕಾಡುಗಳು ಉಳಿಯುವುದರ ಅಗತ್ಯವನ್ನು ಮತ್ತೆ ಬೇರೆಯೇ ವಿವರಿಸಬೇಕಿಲ್ಲ ತಾನೇ? ಹಕ್ಕಿಗಳ ಆಸಕ್ತಿ ಹುಟ್ಟಿದ ಹತ್ತು ವರ್ಷಗಳಲ್ಲಿ ಇದೇ ಮೊದಲಬಾರಿಗೆ ರಣಹದ್ದುಗಳನ್ನು ನೋಡಿ ನನಗೂ ಬಹಳ ಸಂತೋಷವಾಯಿತು.

ಕನ್ನಡ ಹೆಸರು: ಕೆಂದಲೆ ರಣಹದ್ದು

# ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ನಂತರ ಕೆರಿಯರ್ ಆಯ್ಕೆಗಳ ಸಮಗ್ರ ವಿಶ್ಲೇಷಣೆ

ವಿದ್ಯಾರ್ಥಿ ಜೀವನದ ಅತ್ಯಂತ ನಿರ್ಣಾಯಕ ಘಟ್ಟಗಳೆಂದರೆ ಎಸ್ಎಸ್ಎಲ್ಸಿ ಮತ್ತು ಪಿಯುಸಿ. ಇಲ್ಲಿ ನೀವು ಮಾಡುವ ಆಯ್ಕೆ ಕೇವಲ ಒಂದು ಡಿಗ್ರಿಯಲ್ಲ, ಅದು ನಿಮ್ಮ ಜೀವನದ ದಿಕ್ಕನ್ನು ನಿರ್ಧರಿಸುವ ದಾರಿ. ಈ ಲೇಖನದಲ್ಲಿ ಪ್ರತಿಯೊಂದು ವಿಭಾಗದ ಆಳವಾದ ವಿವರಣೆ ಮತ್ತು ಭವಿಷ್ಯದ ಅವಕಾಶಗಳ ಬಗ್ಗೆ ಮಾಹಿತಿ ನೀಡಲಾಗಿದೆ.

ಎಸ್ಎಸ್ಎಲ್ಸಿ (10ನೇ ತರಗತಿ) ನಂತರದ ವಿವಿಧ ಹಾದಿಗಳು ಅನೇಕರು ಹತ್ತನೇ ತರಗತಿಯ ನಂತರ ಕೇವಲ ಪಿಯುಸಿ ಮಾತ್ರ ದಾರಿ ಎಂದು ಭಾವಿಸುತ್ತಾರೆ.

ಆದರೆ ನಿಮ್ಮ ಆಸಕ್ತಿಗೆ ತಕ್ಕಂತೆ ಇಲ್ಲಿ ಹಲವು ಕವಲುಗಳಿವೆ:

ಅ) ಪಿಯುಸಿ (**Pre-University Course - 2 Years**): ಇದು ಸಾಂಪ್ರದಾಯಿಕ ಮತ್ತು ಹೆಚ್ಚು ಜನರು ಆಯ್ಕೆ ಮಾಡುವ ಹಾದಿ.

ವಿಜ್ಞಾನ (**Science**): ಇಂಜಿನಿಯರಿಂಗ್, ವೈದ್ಯಕೀಯ ಅಥವಾ ಸಂಶೋಧನಾ ಕ್ಷೇತ್ರಕ್ಕೆ ಹೋಗಬಯಸುವವರಿಗೆ ಅನಿವಾರ್ಯ. (ವಿಷಯಗಳು: **PCMB, PCMC, PCME**).

ವಾಣಿಜ್ಯ (**Commerce**): ಬ್ಯಾಂಕಿಂಗ್, ಅಕೌಂಟಿಂಗ್, ವ್ಯಾಪಾರ ನಿರ್ವಹಣೆ ಆಸಕ್ತಿ ಇರುವವರಿಗೆ ಸೂಕ್ತ. (ವಿಷಯಗಳು: **CEBA, SEBA, EBAC**).

ಕಲೆ (**Arts**): ಸಾಹಿತ್ಯ, ಇತಿಹಾಸ, ರಾಜಕೀಯ ಅಥವಾ ಸ್ಪರ್ಧಾತ್ಮಕ ಪರೀಕ್ಷೆಗಳ (**IAS/KAS**) ಗುರಿ ಇರುವವರಿಗೆ ಇದು ಉತ್ತಮ ತಳಹದಿ.

ಆ) ಡಿಪ್ಲೊಮಾ (**Polytechnic - 3 Years**): ತಾಂತ್ರಿಕವಾಗಿ ಬೇಗನೆ ಪ್ರೌಢಿಮೆ ಪಡೆಯಲು ಮತ್ತು ಉದ್ಯೋಗಕ್ಕೆ ಸೇರಲು ಇದು ಸುಲಭ ದಾರಿ. ವಿಭಾಗಗಳು: ಸಿವಿಲ್, ಮೆಕ್ಯಾನಿಕಲ್, ಕಂಪ್ಯೂಟರ್ ಸೈನ್ಸ್, ಎಲೆಕ್ಟ್ರಿಕಲ್ ಇತ್ಯಾದಿ.

ಅವಕಾಶ: ಡಿಪ್ಲೊಮಾ ಮುಗಿದ ನಂತರ ನೇರವಾಗಿ ಇಂಜಿನಿಯರಿಂಗ್ (ಃಇ) ಎರಡನೇ ವರ್ಷಕ್ಕೆ (ಪ್ರವೇಶ ಪಡೆಯಬಹುದು.

ಇ) ಐಟಿಐ (**ITI - 1 to 2 Years**): ಕೈಗಾರಿಕಾ ಕ್ಷೇತ್ರದಲ್ಲಿ ತಕ್ಷಣದ ಉದ್ಯೋಗ ಬಯಸುವವರಿಗೆ ಇದು ಹೇಳಿ ಮಾಡಿಸಿದ ಕೋರ್ಸ್. ಇದರಲ್ಲಿ ಎಲೆಕ್ಟ್ರಿಷಿಯನ್, ಪ್ಲಂಬರ್, ಡ್ರಾಫ್ಟ್ಸ್‌ಮ್ಯಾನ್ ನಂತಹ ವೃತ್ತಿಪರ ತರಬೇತಿ ಸಿಗುತ್ತದೆ.




ಪಿಯುಸಿ ನಂತರದ ಉನ್ನತ ಶಿಕ್ಷಣದ ಹಾದಿಗಳು ಪಿಯುಸಿ ನಂತರದ ಆಯ್ಕೆಗಳು ವಿಸ್ತಾರವಾಗಿವೆ. ನಿಮ್ಮ ವಿಭಾಗಕ್ಕೆ ಅನುಗುಣವಾಗಿ ಇಲ್ಲಿವೆ ಪ್ರಮುಖ ಆಯ್ಕೆಗಳು: ಖ. ವಿಜ್ಞಾನ ವಿಭಾಗದವರಿಗೆ (**After PUC Science**): ವೈದ್ಯಕೀಯ ಮತ್ತು ಸಂಬಂಧಿತ ಕ್ಷೇತ್ರ: ಓಇಇಖ ಪರೀಕ್ಷೆ ಬರೆಯುವ ಮೂಲಕ **MBBS, BDS** (ಹಲ್ಲು), **BAMS** (ಆಯುರ್ವೇದ), **BHMS** (ಹೋಮಿಯೋಪತಿ) ಸೇರಬಹುದು. ಇವುಗಳಲ್ಲದೆ ಭಾರಿ ಬೇಡಿಕೆಯಿದೆ.

ತಾಂತ್ರಿಕ ಕ್ಷೇತ್ರ (**Engineering**): ಏಅಇಖ ಅಥವಾ ಎಇಇ ಪರೀಕ್ಷೆಗಳ ಮೂಲಕ ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಾನಿಕ್ಸ್ ಮಾತ್ರವಲ್ಲದೆ ಇಂದಿನ ಟ್ರೆಂಡ್ ಆಗಿರುವ ಂಖ (ಕೃತಕ ಬುದ್ಧಿಮತ್ತೆ) ಮತ್ತು ವಿಭಾಗಗಳನ್ನು ಆರಿಸಿಕೊಳ್ಳಬಹುದು.

ಕೃಷಿ ವಿಜ್ಞಾನ ರೈತ ದೇಶದ ಬೆನ್ನೆಲುಬು, ಕೃಷಿ ಕ್ಷೇತ್ರದಲ್ಲಿ ಸಂಶೋಧನೆ ಮಾಡಲು ಒಂದು ಅತ್ಯುತ್ತಮ ಆಯ್ಕೆ.

ಖಖ. ವಾಣಿಜ್ಯ ವಿಭಾಗದವರಿಗೆ ವೃತ್ತಿಪರ ಕೋರ್ಸ್‌ಗಳು: ಅಂ ಅಥವಾ **CS (Company Secretary)**. ಇವು ಕಠಿಣವಾದರೂ ಅತಿ ಹೆಚ್ಚು ಗೌರವ ಮತ್ತು ಸಂಬಳ ತಂದುಕೊಡುವ ವೃತ್ತಿಗಳು.

ನಿರ್ವಹಣೆ (**Management**): ಉದ್ಯಮ ನಡೆಸುವ ಆಸಕ್ತಿ ಇದ್ದರೆ ಃಃಂ ಅಥವಾ ಃಃಂ ಮಾಡಬಹುದು.

ಕಾನೂನು (ಐಚಿತಿ): ವಾಣಿಜ್ಯ ಪದವಿಯೊಂದಿಗೆ ಕಾನೂನು ಅಭ್ಯಾಸ ಮಾಡಲು 5 ವರ್ಷಗಳ ಸಂಯೋಜಿತ ಕೋರ್ಸ್‌ಗಳು ಲಭ್ಯವಿವೆ.

ಖಖಖ. ಕಲಾ ವಿಭಾಗದವರಿಗೆ (**After PUC Arts**): ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ: ನೀವು ಐಎಎಸ್ ಅಥವಾ ಕೆಎಎಸ್ ಅಧಿಕಾರಿಯಾಗುವ ಕನಸು ಕಂಡಿದ್ದರೆ, ಬಿ.ಎ (ಃಂ) ಪದವಿಯ ಜೊತೆಗೆ ಇತಿಹಾಸ ಮತ್ತು ಸಂವಿಧಾನದ ಆಳವಾದ ಜ್ಞಾನ ಪಡೆಯಬಹುದು.

ಸೃಜನಶೀಲ ಕ್ಷೇತ್ರ: ಫ್ಯಾಷನ್ ಡಿಸೈನಿಂಗ್, ಇಂಟೀರಿಯರ್ ಡಿಸೈನಿಂಗ್, ಮತ್ತು ಅನಿಮೇಷನ್ ಕ್ಷೇತ್ರಗಳು ಇಂದು ಲಕ್ಷಾಂತರ ಉದ್ಯೋಗಗಳನ್ನು ಸೃಷ್ಟಿಸುತ್ತಿವೆ.

ಹೋಟೆಲ್ ಮ್ಯಾನೇಜ್‌ಮೆಂಟ್: ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ಈ ಕೋರ್ಸ್ ಉತ್ತಮ ಭವಿಷ್ಯ ನೀಡುತ್ತದೆ. ಇಂದಿನ ಕಾಲಕ್ಕೆ ತಕ್ಕಂತೆ ಹೊಸ ಆಯ್ಕೆಗಳು ಸಾಂಪ್ರದಾಯಿಕ ಕೋರ್ಸ್‌ಗಳ ಆಚೆಗೂ ಇಂದು ಕೆಲವು ವಿಶಿಷ್ಟ ಅವಕಾಶಗಳಿವೆ:

ಡಿಜಿಟಲ್ ಮಾರ್ಕೆಟಿಂಗ್: ಇಂದಿನ ಆನ್‌ಲೈನ್ ಯುಗದಲ್ಲಿ ಇದಕ್ಕೆ ಭಾರಿ ಬೇಡಿಕೆಯಿದೆ.

ಡೇಟಾ ಅನಾಲಿಟಿಕ್ಸ್: ಮಾಹಿತಿಯನ್ನು ವಿಶ್ಲೇಷಿಸುವ ವೃತ್ತಿ.

ಸೈಕಾಲಜಿ (ಮನೋವಿಜ್ಞಾನ): ಮಾನಸಿಕ ಆರೋಗ್ಯದ ಅರಿವು ಹೆಚ್ಚುತ್ತಿರುವ ಈ ಕಾಲದಲ್ಲಿ ಕೌನ್ಸಿಲರ್ ಆಗಲು ಹೆಚ್ಚಿನ ಅವಕಾಶಗಳಿವೆ.

ವಿದ್ಯಾರ್ಥಿಗಳಿಗೆ ಕಿವಿಮಾತು: ಯಾವುದೇ ಕೋರ್ಸ್ ಆಯ್ಕೆ ಮಾಡುವಾಗ ಈ ಮೂರು ಅಂಶಗಳನ್ನು ಗಮನಿಸಿ:

ಆಸಕ್ತಿ: ನಿಮಗೆ ಆ ವಿಷಯದ ಬಗ್ಗೆ ಕುತೂಹಲವಿದೆಯೇ?

ಸಾಮರ್ಥ್ಯ: ಆ ವಿಷಯವನ್ನು ಓದಿ ಅರ್ಥೈಸಿಕೊಳ್ಳುವ ಶಕ್ತಿ ನಿಮಗಿದೆಯೇ?

ಮಾರುಕಟ್ಟೆ ಬೇಡಿಕೆ ಭವಿಷ್ಯದಲ್ಲಿ ಆ ಕೋರ್ಸ್‌ಗೆ ಕೆಲಸದ ಅವಕಾಶಗಳಿವೆಯೇ?

ಕೇವಲ ಪಕ್ಕದ ಮನೆಯವರು ಸೇರಿದ್ದಾರೆಂದೋ ಅಥವಾ ಸ್ನೇಹಿತರು ಹೋಗುತ್ತಾರೆಂದೋ ಯಾವುದೋ ಕೋರ್ಸ್‌ಗೆ ಸೇರಬೇಡಿ. ನಿಮ್ಮ ಯಶಸ್ಸು ನಿಮ್ಮ ಸರಿಯಾದ ಆಯ್ಕೆಯಲ್ಲಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಹುಳಿಯಾರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 27ನೇ ವಾರದ ಜನಸ್ಪಂದನಾ ಕಾರ್ಯಕ್ರಮ

# ನಾನು ನಿಮ್ಮವನು, ನಿಮ್ಮ ಮನೆ ಬಾಗಿಲಿಗೆ ಬಂದಿದ್ದೇನೆ – ಶಾಸಕ ಸಿ.ಬಿ. ಸುರೇಶ್ ಬಾಬು

ಸೂರ್ಯಪ್ರಗತಿ ನ್ಯೂಸ್.ಕಾಂ

ಹುಳಿಯಾರು : ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ದೂರದ ಸರಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಲು ಗ್ರಾಮ ಹಾಗೂ ಪಟ್ಟಣ ಮಟ್ಟದಲ್ಲಿ ಜನಸ್ಪಂದನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಶಾಸಕ ಸಿ.ಬಿ. ಸುರೇಶ್ ಬಾಬು ತಿಳಿಸಿದರು.

ಪಟ್ಟಣ ಪಂಚಾಯಿತಿ ವ್ಯಾಪ್ತಿಯ ವಾರ್ಡ್ ನಂ. 08ರ ವಳಗೆರೆಹಳ್ಳಿಯಲ್ಲಿ ಮನೆ ಬಾಗಿಲಿಗೆ ಮನೆ ಮಗ ಶೀರ್ಷಿಕೆಯಡಿ ನಡೆದ 27ನೇ ವಾರದ ಜನಸ್ಪಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾನು ಯಾವತ್ತೂ ನಿಮ್ಮವನಾಗಿದ್ದು, ನಿಮ್ಮ ಮನೆ ಬಾಗಿಲಿಗೆ ಬಂದಿದ್ದೇನೆ. ಯಾವುದೇ ಲಂಚದ ಆಮಿಷ ಅಥವಾ ಮಧ್ಯವರ್ತಿಗಳ ಅವಶ್ಯಕತೆ ಇಲ್ಲದೆ ಜನರು ತಮ್ಮ ಅಹವಾಲುಗಳನ್ನು ನೇರವಾಗಿ ನನಗೆ ಸಲ್ಲಿಸಬಹುದು. ಗ್ರಾಮೀಣ ಮಟ್ಟಕ್ಕೆ ಬಂದು ಸಮಸ್ಯೆಗಳನ್ನು ಅರಿತು ಪರಿಹರಿಸಲು ನಾನು ಹಾಗೂ ಅಧಿಕಾರಿಗಳು ಸಿದ್ಧರಾಗಿದ್ದೇವೆ ಎಂದರು.

ಹುಳಿಯಾರು ಪಟ್ಟಣ ಅಭಿವೃದ್ಧಿಯತ್ತ ವೇಗವಾಗಿ ಸಾಗುತ್ತಿದ್ದು, ಮುಂದಿನ ದಿನಗಳಲ್ಲಿ ತಾಲೂಕಾಗುವ ಎಲ್ಲಾ ಸಾಧ್ಯತೆಗಳಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಕಳೆದ ಮೂರು ವರ್ಷಗಳಲ್ಲಿ ಈ ಭಾಗದಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದರು.

ಆಯುಷ್ ಇಲಾಖೆಯಿಂದ
ಉಚಿತ ಆರೋಗ್ಯ ಜಾಗೃತಿ ಶಿಬಿರ
ವಳಗೆರೆಯಲ್ಲಿ ನಡೆದ ಜನಸ್ಪಂದನಾ ಕಾರ್ಯಕ್ರಮದ ಅಂಗವಾಗಿ ತಾಲೂಕು ಸರಕಾರಿ ಆಯುಷ್ ಆರೋಗ್ಯ ಇಲಾಖೆಯಿಂದ ಉಚಿತ ಆರೋಗ್ಯ ಶಿಬಿರ ಹಾಗೂ ಆಯುಷ್ ಅರಿವು / ಮನೆ ಮದ್ದು ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಶಿಬಿರದಲ್ಲಿ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿ ಉಚಿತ ಔಷಧಿಗಳನ್ನು ವಿತರಿಸಲಾಯಿತು.

ವಳಗೆರೆಹಳ್ಳಿಗೆ ಬರುವ ರಸ್ತೆ ಹಿಂದೆ ಹೇಗಿತ್ತು, ಈಗ ಹೇಗಿದೆ ಎಂಬುದನ್ನು ಜನರು ಕಣ್ಣಾರೆ ನೋಡುತ್ತಿದ್ದಾರೆ. ಹುಳಿಯಾರು ಭಾಗದಲ್ಲಿ ಸುಮಾರು 70 ಕೋಟಿ ರೂ. ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ತಿಳಿಸಿದರು.ಯಾವುದೇ ಪಕ್ಷ, ಜಾತಿ ಅಥವಾ ಭಿನ್ನಾಭಿಪ್ರಾಯವಿಲ್ಲದೆ ಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಎಲ್ಲಾ ಇಲಾಖೆಗಳ



ಅಧಿಕಾರಿಗಳನ್ನು ಒಂದೇ ವೇದಿಕೆಯಲ್ಲಿ ತರಲಾಗಿದೆ ಎಂದು ಹೇಳಿದ ಅವರು, ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದರು. ಹುಳಿಯಾರು ಪಟ್ಟಣದಲ್ಲಿ 7 ಕೋಟಿಗೂ ಹೆಚ್ಚು ವೆಚ್ಚದಲ್ಲಿ ನೂತನ ಆಸ್ಪತ್ರೆ ಕಟ್ಟಡ ನಿರ್ಮಾಣವಾಗುತ್ತಿದ್ದು, ಅಗತ್ಯ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನಿಯೋಜಿಸಿ ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡುವುದು ನಮ್ಮ ಜವಾಬ್ದಾರಿ ಎಂದು ಹೇಳಿದರು. ನಂತರ ವಾರ್ಡ್ ನಂ. 09, 10 ಹಾಗೂ 11ರಲ್ಲಿ ಕೂಡ ಜನಸ್ಪಂದನಾ ಕಾರ್ಯಕ್ರಮ ಮುಂದುವರಿಯಿತು, ಸಾರ್ವಜನಿಕರು ವಸತಿ, ನಿವೇಶನ, ರುದ್ರಭೂಮಿಗೆ ಜಾಗ, ವಿದ್ಯುತ್, ರೇಷನ್ ಕಾರ್ಡ್ ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳ ಕುರಿತ ಅರ್ಜಿಗಳನ್ನು ಶಾಸಕರಿಗೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಪ್ರೀತಿ ರಾಘವೇಂದ್ರ, ಉಪಾಧ್ಯಕ್ಷೆ ಕಾವ್ಯಾರಾಣಿ, ಮುಖ್ಯಾಧಿಕಾರಿ ಮಂಜುನಾಥ್ ಎಲ್ ವಿ, ಆರ್ ಐ ಶ್ರೀನಿವಾಸ್, ಮುಖಂಡರಾದ ಮಂಜುಳಾ ಗವಿರಂಗಯ್ಯ, ರಾಘವೇಂದ್ರ, ಕಿರಣ್ ಕುಮಾರ್, ಗೌಡಿ ಇದ್ದರು.

# ವೇಗದ ಜೀವನ, ಸಮಯಕ್ಕೆ ಸರಿಯಾಗಿ ತಿನ್ನದಿರುವುದು, ಅಜೀರ್ಣಕ್ಕೆ ಕಾರಣವಾಗಬಹುದು

ಆಹಾರ ಪದ್ಧತಿಯಲ್ಲಿ ಮಾಡಿಕೊಂಡಿರುವ ಬದಲಾವಣೆಗಳು ಅಜೀರ್ಣಕ್ಕೆ ಕಾರಣವಾಗುತ್ತಿದೆ. ಈ ಸಮಸ್ಯೆ ದೀರ್ಘಕಾಲದವರೆಗೆ ಮುಂದುವರಿದರೆ, ಅದು ಹಸಿವು ಕಡಿಮೆಯಾಗುವುದಕ್ಕೆ ಮತ್ತು ದೇಹದಲ್ಲಿ ದೌರ್ಬಲ್ಯಕ್ಕೆ ಕಾರಣವಾಗಬಹುದು. ಹಾಗಾಗಿ ಈ ರೀತಿಯ ಲಕ್ಷಣ ಕಂಡುಬಂದಾಗ ಅದನ್ನು ಲಘುವಾಗಿ ತೆಗೆದುಕೊಳ್ಳಬಾರದು. ಹಾಗಾದರೆ ಯಾವ ರೀತಿಯ ಆಹಾರಗಳು ಅಜೀರ್ಣಕ್ಕೆ ಕಾರಣವಾಗಬಹುದು, ಈ ರೀತಿಯ ಸಮಸ್ಯೆ ತಡೆಯಲು ಏನು ಮಾಡಬಹುದು

ಇತ್ತೀಚಿನ ದಿನಗಳಲ್ಲಿ, ಅನೇಕರಲ್ಲಿ ಕಂಡುಬರುತ್ತಿರುವ ಹೆಚ್ಚಿನ ಆರೋಗ್ಯ ಸಮಸ್ಯೆಗಳಲ್ಲಿ ಅಜೀರ್ಣವು ಒಂದು. ವೇಗದ ಜೀವನ, ಸಮಯಕ್ಕೆ ಸರಿಯಾಗಿ ತಿನ್ನದಿರುವುದು, ಹೆಚ್ಚು ಹುರಿದ ಮತ್ತು ಕರಿದ ಆಹಾರಗಳ ಸೇವನೆಯಿಂದ ಅಜೀರ್ಣ ಉಂಟಾಗುತ್ತದೆ. ಇದು ಜೀರ್ಣಾಂಗ ವ್ಯವಸ್ಥೆಯು ಆಹಾರವನ್ನು ಸರಿಯಾಗಿ ಜೀರ್ಣಿಸಿಕೊಳ್ಳಲು ಸಾಧ್ಯವಾಗದ ಸ್ಥಿತಿಯಾಗಿದೆ. ಇದರಿಂದ ಹೊಟ್ಟೆಯಲ್ಲಿ ಭಾರವಾದ ಭಾವನೆ, ಅನಿಲ, ಸುಡುವ ಸಂವೇದನೆ, ಉಬ್ಬುವುದು ಮತ್ತು ಅಸ್ವಸ್ಥತೆ ಕಂಡುಬರಬಹುದು. ಕೆಲವೊಮ್ಮೆ, ತಿಂದ ನಂತರ, ಹೊಟ್ಟೆ ನೋವು (ಖಣಂಟಚಿಛ್ಬಿ ಕಚಿುಟಿ), ವಾಕರಿಕೆ ಅಥವಾ ಎದೆಯಲ್ಲಿ ಸುಡುವ ಸಂವೇದನೆ ಕೂಡ ಅನುಭವಕ್ಕೆ ಬರಬಹುದು. ಆದರೆ ಈ ಸಮಸ್ಯೆ ದೀರ್ಘಕಾಲದವರೆಗೆ ಮುಂದುವರಿದರೆ, ಅದು ಹಸಿವು ಕಡಿಮೆಯಾಗುವುದಕ್ಕೆ ಮತ್ತು ದೇಹದಲ್ಲಿ ದೌರ್ಬಲ್ಯಕ್ಕೆ




ಕಾರಣವಾಗಬಹುದು. ಹಾಗಾಗಿ ಈ ರೀತಿಯ ಲಕ್ಷಣ ಕಂಡುಬಂದಾಗ ಅದನ್ನು ಲಘುವಾಗಿ ತೆಗೆದುಕೊಳ್ಳಬಾರದು. ಹಾಗಾದರೆ ಯಾವ ರೀತಿಯ ಆಹಾರಗಳು ಅಜೀರ್ಣಕ್ಕೆ ಕಾರಣವಾಗಬಹುದು, ಈ ರೀತಿಯ ಸಮಸ್ಯೆ ತಡೆಯಲು ಏನು ಮಾಡಬಹುದು ತಿಳಿದುಕೊಳ್ಳಿ.

## ಯಾವ ರೀತಿಯ ಆಹಾರಗಳು ಅಜೀರ್ಣಕ್ಕೆ ಕಾರಣವಾಗುತ್ತವೆ?

ಆರ್‌ಎಂಎಲ್ ಆಸ್ಪತ್ರೆಯ ವೈದ್ಯಕೀಯ ವಿಭಾಗದ ನಿರ್ದೇಶಕರಾದ ಪ್ರೊಫೆಸರ್ ಡಾ. ಸುಭಾಷ್ ಗಿರಿ ಅವರು ಹೇಳುವ ಪ್ರಕಾರ, ಹುರಿದ ಮತ್ತು ಹೆಚ್ಚು ಮಸಾಲೆಯುಕ್ತ ಆಹಾರಗಳು ಅಜೀರ್ಣಕ್ಕೆ ಪ್ರಮುಖ ಕಾರಣ. ಜೊತೆಗೆ ಫಾಸ್ಟ್ ಫುಡ್, ಜಂಕ್ ಫುಡ್ ಮತ್ತು ಹೆಚ್ಚಿನ ಎಣ್ಣೆಯಲ್ಲಿ ಬೇಯಿಸಿದ ಆಹಾರಗಳು ಕೂಡ ಜೀರ್ಣಿಸಿಕೊಳ್ಳಲು ಕಷ್ಟವಾಗುತ್ತದೆ. ಅತಿಯಾದ ಸಿಹಿತಿಂಡಿ, ತಂಪು ಪಾನೀಯ ಮತ್ತು ಕೆಫೀನ್ ಹೊಂದಿರುವ ಪಾನೀಯಗಳು ಸಹ ಜೀರ್ಣಕ್ರಿಯೆಯನ್ನು ಅಡ್ಡಿಪಡಿಸಬಹುದು. ಅಷ್ಟೇ ಅಲ್ಲ ತಡರಾತ್ರಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಊಟ ಮಾಡುವುದರಿಂದ ಹೊಟ್ಟೆಗೆ ವಿಶ್ರಾಂತಿ ಸಿಗದಿರಬಹುದು, ಇದು ಕೂಡ ಅಜೀರ್ಣ ಸಮಸ್ಯೆಗಳನ್ನು ಹೆಚ್ಚಿಸಬಹುದು. ಅತಿಯಾದ ಮಸಾಲೆ, ಸಂಸ್ಕರಿಸಿದ ಆಹಾರಗಳು ಮತ್ತು ಪ್ಯಾಕ್ ಮಾಡಿದ ತಿಂಡಿಗಳು ಸಹ ಅನಿಲ ಮತ್ತು ಆಮ್ಲೀಯತೆಯನ್ನು ಉಂಟುಮಾಡುತ್ತವೆ. ಕೆಲವರಿಗೆ ಹಾಲು ಅಥವಾ ಡೈರಿ ಉತ್ಪನ್ನಗಳ ಸೇವನೆ ಮಾಡುವುದರಿಂದಲೂ ಕೂಡ ಅಜೀರ್ಣವಾಗಬಹುದು.

## ಅಜೀರ್ಣದಂತಹ ಸಮಸ್ಯೆಗಳನ್ನು ತಡೆಯುವುದು ಹೇಗೆ?

ಸಾಮಾನ್ಯವಾಗಿ ಅಜೀರ್ಣವಾಗದಂತೆ ತಡೆಯಲು, ಹಗುರವಾದ ಮತ್ತು ಸಮತೋಲಿತ ಆಹಾರ ಸೇವನೆ ಮಾಡಿ. ಸಮಯಕ್ಕೆ ಸರಿಯಾಗಿ ತಿನ್ನುವುದರ ಮೂಲಕ ದೀರ್ಘಕಾಲದ ವರೆಗೆ ಹಸಿವಿನಿಂದ ಇರುವುದನ್ನು ತಪ್ಪಿಸಿ. ಕರಿದ ಮತ್ತು ಜಂಕ್ ಆಹಾರಗಳಿಂದ



ದೂರವಿರಿ. ಆಹಾರವನ್ನು ಚೆನ್ನಾಗಿ ಅಗಿಯಿರಿ ಮತ್ತು ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯಿರಿ. ಪ್ರತಿದಿನ ಬಿಡುವಿದ್ದಾಗ ಸ್ವಲ್ಪ ಸಮಯ ನಡೆಯುವುದು ಅಥವಾ ಲಘು ವ್ಯಾಯಾಮ ಮಾಡುವುದು ಜೀರ್ಣಕ್ರಿಯೆಗೆ ಪ್ರಯೋಜನಕಾರಿ. ಒತ್ತಡವನ್ನು ಕಡಿಮೆ ಮಾಡಲು ಪ್ರಯತ್ನಿಸಿ ಮತ್ತು ತಡರಾತ್ರಿಯಲ್ಲಿ ಆಹಾರ ಸೇವನೆ ಮಾಡುವುದನ್ನು ತಪ್ಪಿಸಿ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಪ್ರಥಮ ಪಿಯುಸಿ ಕಾಲೇಜುಗಳಲ್ಲಿ ದಾಖಲಾತಿಗೆ ನೂಕು ನುಗ್ಗಲು: "ಪಿಯು ಕಾಮರ್ಸ್ ಮತ್ತು ವಿಜ್ಞಾನ ವಿಭಾಗಕ್ಕೆ ಭಾರಿ ಬೇಡಿಕೆ

ಸೂರ್ಯಪ್ರಗತಿ ನ್ಯೂಸ್.ಕಾಂ

ತಿಪಟೂರು.ರಾಜ್ಯದಲ್ಲಿ ಈ ಬಾರಿ ಎಸ್ ಎಸ್ ಎಲ್ ಸಿ ದಾಖಲೆಯ ಫಲಿತಾಂಶ ಬಂದಿರುವುದರಿಂದ ರಾಜ್ಯದ ಎಲ್ಲ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ದಾಖಲಾತಿಗೆ ನೂಕು ನುಗ್ಗಲು ಉಂಟಾಗಿದೆ. ಅದರಲ್ಲೂ ಈ ಬಾರಿ ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಿಗೆ ಎಲ್ಲಿಲ್ಲದ ಬೇಡಿಕೆ ಬಂದಿದ್ದು ಕಲಾ ವಿಭಾಗದ ನಿರಾಸಕ್ತಿ ಬೇಸರದ ಸಂಗತಿಯಾಗಿದೆ.

ರಾಜ್ಯದ ಸರಾಸರಿಗೆ ಹೋಲಿಸಿದರೆ ಕಾಮರ್ಸ್‌ಗೆ ಹೆಚ್ಚಿನ ಬೇಡಿಕೆ ಇದೆ. ವಾಣಿಜ್ಯ ವಿಭಾಗದಲ್ಲಿ ಕಂಪ್ಯೂಟರ್, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ ಮತ್ತು ಲೆಕ್ಕಶಾಸ್ತ್ರ ಕಾಂಜಿನೇಶನ ತೆಗೆದುಕೊಳ್ಳುವುದಕ್ಕೆ ವಿದ್ಯಾರ್ಥಿಗಳು ಮತ್ತು ಪೋಷಕರು ಫಲಿತಾಂಶ ಬರುವುದಕ್ಕೂ ಮುನ್ನವೇ ರಾಜ್ಯದ ಎಲ್ಲೆಡೆ ಪ್ರತಿಷ್ಠಿತ ಕಾಲೇಜುಗಳಲ್ಲಿ ಅಡ್ವಾನ್ಸ್ ಬುಕ್ಕಿಂಗ್ ಮಾಡಿದ್ದಾರೆ. ವಿದ್ಯಾರ್ಥಿಗಳೂ ಸಹ ನಮಗೆ ಕಾಮರ್ಸ್ ಮತ್ತು ವಿಜ್ಞಾನ ವಿಭಾಗದಲ್ಲಿ ಆಸಕ್ತಿ ಇದೆ ಎಂದು ಹೇಳುತ್ತಿದ್ದಾರೆ. ಹಾಗಾಗಿ ಕಲಾವಿಭಾಗಕ್ಕೆ ಸೇರುವ ವಿದ್ಯಾರ್ಥಿಗಳ ಸಂಖ್ಯೆವರ್ಷದಿಂದ ವರ್ಷಕ್ಕೆ ಇಳಿಯುತ್ತಿದೆ.

ದಶಕಗಳ ಹಿಂದೆ ಎಸ್ ಎಸ್ ಎಲ್‌ಸಿ ಮುಗಿದ ತಕ್ಷಣ ಶೇ. 70ರಷ್ಟು ವಿದ್ಯಾರ್ಥಿಗಳು ಕಲಾ ವಿಭಾಗವನ್ನು ಸೇರಿಕೊಳ್ಳುತ್ತಿದ್ದರು. ಆದರೆ ವಿಜ್ಞಾನ ವಿಭಾಗದಲ್ಲಿ ಮುಂದೆ ಸಾಫ್ಟವೇರ್ ಇಂಜಿನಿಯರ್ ಮತ್ತು ಡಾಕ್ಟರ್ ಗಳಾಗಿ ಕೈತುಂಬ ಸಂಬಳ ಪಡೆಯುತ್ತಿದ್ದರು. ಅದೇ ರೀತಿ ವಾಣಿಜ್ಯ ವಿಭಾಗ ಮುಗಿಸಿದರೆ ಮುಂದೆ ಮ್ಯಾನೇಜ್ಮೆಂಟ್(ಎಂಬಿಎ) ಕೋರ್ಸು ಬ್ಯಾಂಕು, ಲೆಕ್ಕಪತ್ರ ವಿಭಾಗದಲ್ಲಿ ಕೆಲಸ ಗಿಟ್ಟಿಸಿಕೊಳ್ಳಲು ಮುಂದಾಗಿದ್ದರು. ಮ್ಯಾನೇಜ್ಮೆಂಟ್ ಕಲಿತ ವಿದ್ಯಾರ್ಥಿಗಳಿಗೆ ಕಂಪನಿಗಳೂ ಸಹ ಹೆಚ್ಚು ಸಂಬಳ ನೀಡತೊಡಗಿದವು. ದೇಶದ ಬಹುತೇಕ ದೊಡ್ಡ ನಗರಗಳಲ್ಲಿ ದೊಡ್ಡ, ದೊಡ್ಡ ಬಹುರಾಷ್ಟ್ರೀಯ ಕಂಪನಿಗಳು ಎಂಬಿಎ ಕಲಿತ ವಿದ್ಯಾರ್ಥಿಗಳನ್ನು ನೇಮಕ ಮಾಡಿಕೊಳ್ಳತೊಡಗಿದರು. ಇದರಿಂದಾಗಿ ವರ್ಷದಿಂದ ವರ್ಷಕ್ಕೆ ಕಾಮರ್ಸ್ ಕೋರ್ಸಿಗೆ ಡಿಮ್ಯಾಂಡ್




ಹೆಚ್ಚಾಗತೊಡಗಿದೆ.

ಆದರೆ ದುರಾದೃಷ್ಟ ಸಂಗತಿ ಎಂದರೆ ಕಲಾ ವಿಭಾಗಕ್ಕೆ ಸೇರುತ್ತಿರುವವರ ಸಂಖ್ಯೆ ಗಣನೀಯವಾಗಿ ಕುಸಿಯುತ್ತಿರುವುದು ಆತಂಕಕ್ಕೆ ಕಾರಣವಾಗಿದೆ

## ಪಿಯುಸಿ ಕಲಾ ವಿಭಾಗ ದುಸ್ಥಿತಿಗೆ ಹಲವು ಕಾರಣಗಳಿವೆ

1. ಮುಖ್ಯವಾಗಿ, ಕಲಾ ವಿಭಾಗದ ಪದವಿಗಳು ಉದ್ಯೋಗಾವಕಾಶಗಳ ಕೊರತೆಯಿಂದಾಗಿ ಕಡಿಮೆ ಜನಪ್ರಿಯವಾಗಿವೆ. ಜೊತೆಗೆ, ಪದವಿಗಳು ನೀಡುವ ಜ್ಞಾನ ಮತ್ತು ಕೌಶಲ್ಯಗಳು ನೇರವಾಗಿ ಉದ್ಯೋಗಕ್ಕೆ ಸಂಬಂಧಿಸಿಲ್ಲ ಎಂದು ಭಾವಿಸುವುದು.

2.ಉದ್ಯೋಗಾವಕಾಶಗಳ ಕೊರತೆ: ಕಲಾ ವಿಭಾಗದ ಪದವಿಗಳು, ಉದ್ಯೋಗ ಮಾರುಕಟ್ಟೆಯಲ್ಲಿ ಬೇಡಿಕೆಯಿರುವುದಿಲ್ಲ ಎಂದು ಭಾವಿಸುವುದು ಒಂದು ಪ್ರಮುಖ ಕಾರಣ. ಕಲಾ ವಿಭಾಗದ ಪದವಿಗಳು ಹೆಚ್ಚು ಉದ್ಯೋಗಾವಕಾಶಗಳನ್ನು ನೀಡುವುದಿಲ್ಲ ಎಂಬ ತಿಳುವಳಿಕೆ ವಿದ್ಯಾರ್ಥಿಗಳಲ್ಲಿ ಇದೆ.

3.ಪಠ್ಯಕ್ರಮ: ಕಲಾ ವಿಭಾಗದ ಪಠ್ಯಕ್ರಮವು ಉದ್ಯೋಗಕ್ಕೆ ನೇರವಾಗಿ ಸಂಬಂಧಿಸಿಲ್ಲ ಎಂದು ವಿದ್ಯಾರ್ಥಿಗಳು ಭಾವಿಸುವುದು ಇನ್ನೊಂದು ಕಾರಣ.

4. ಪಠ್ಯಕ್ರಮವು ಹೆಚ್ಚು ಸೈದ್ಧಾಂತಿಕವಾಗಿದ್ದು, ಪ್ರಾಯೋಗಿಕ ಕೌಶಲ್ಯಗಳಿಗೆ ಕಡಿಮೆ ಒತ್ತು ನೀಡುತ್ತದೆ.

5.ಅಪರಿಮಿತ ಸ್ಪರ್ಧೆ: ಕಲಾ ವಿಭಾಗದ ಪದವಿಗಳು ಹೆಚ್ಚು ಜನಪ್ರಿಯವಾಗಿಲ್ಲದ ಕಾರಣ, ಈ ವಿಭಾಗದಲ್ಲಿರುವ ಪದವೀಧರರು ಉದ್ಯೋಗಕ್ಕಾಗಿ ಹೆಚ್ಚು ಸ್ಪರ್ಧಿಸಬೇಕಾಗುತ್ತದೆ.

6.ಅರ್ಥಗತ ಕಾರಣಗಳು: ಕಲಾ ವಿಭಾಗದ ಪದವಿಗಳು ಹೆಚ್ಚು ಉದ್ಯೋಗಾವಕಾಶಗಳನ್ನು ನೀಡುವುದಿಲ್ಲ ಎಂಬ ಭಾವನೆಯಿಂದ, ವಿದ್ಯಾರ್ಥಿಗಳು ಹೆಚ್ಚು ದುಡ್ಡು ಖರ್ಚು ಮಾಡಬೇಕಾದ ಬಲವರ್ಗವನ್ನು ಹೆಚ್ಚು ಬೇರೆ ವಿಭಾಗಗಳನ್ನು ಆಯ್ಕೆ ಮಾಡುತ್ತಾರೆ.

7.ಪೋಷಕರ ಆಲೋಚನೆ: ಪೋಷಕರು ಕಲಾ ವಿಭಾಗದ ಪದವಿಗಳು ಉದ್ಯೋಗಕ್ಕೆ ಅನುಕೂಲಕರವಾಗಿಲ್ಲ ಎಂದು ಭಾವಿಸುವುದರಿಂದ, ತಮ್ಮ ಮಕ್ಕಳನ್ನು ಕಲಾ ವಿಭಾಗಕ್ಕೆ ಸೇರಿಸಲು ಹಿಂಜರಿಯುತ್ತಾರೆ.

8.ಕಾಲೇಜುಗಳ ಗುಣಮಟ್ಟ: ಕೆಲವು ಕಾಲೇಜುಗಳು ಕಲಾ ವಿಭಾಗದ



ಪದವಿಗಳಿಗೆ ಕಡಿಮೆ ಒತ್ತು ನೀಡುತ್ತವೆ, ಇದರಿಂದಾಗಿ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಾಗುವುದಿಲ್ಲ.

ಕಲಾ ವಿಭಾಗದಲ್ಲಿ ಹೆಚ್ಚು ಬೇಡಿಕೆ ಇರುವ ಕೋರ್ಸ್‌ಗಳು ಹೋಟೆಲ್ ಮ್ಯಾನೇಜ್‌ಮೆಂಟ್, ಮಾಸ್ ಕಮ್ಯುನಿಕೇಶನ್, ಮತ್ತು ಪತ್ರಿಕೋದ್ಯಮದಂತಹ ಕೋರ್ಸ್‌ಗಳು ಹೆಚ್ಚು ಬೇಡಿಕೆಯನ್ನು ಹೊಂದಿದ್ದು, ಕಲಾ ವಿಭಾಗದ ಪದವಿಗಳಿಗೆ ಒಂದು ಸ್ಪರ್ಧೆಯನ್ನು ಸೃಷ್ಟಿಸುತ್ತವೆ. ಇವುಗಳ ಹೊರತಾಗಿ, ಕಲಾ ವಿಭಾಗದ ದುಸ್ಥಿತಿಗೆ ಬೇರೆ ಬೇರೆ ಕಾರಣಗಳು ಇರಬಹುದು. ಆದರೂ, ಮೇಲೆ ತಿಳಿಸಿದ ಕಾರಣಗಳು ಮುಖ್ಯವಾಗಿವೆ ಎಂದು ಹೇಳಬಹುದು.

ಇನ್ನಾದರೂ ಸರ್ಕಾರಗಳು ಎಚ್ಚೆತ್ತುಕೊಂಡು ಕಲಾವಿಭಾಗವನ್ನು ಉಳಿಸಬೇಕೆಂದು ಈ ಮೂಲಕ ಮನವಿ ಮಾಡಿಕೊಳ್ಳುತ್ತೇವೆ"

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಅಸ್ವಸ್ಥತೆಯಿಂದ ದೂರ ಇರಬೇಕಾದರೆ ನಮ್ಮ ಪ್ರತಿರೋಧ ಶಕ್ತಿಯನ್ನು ಬೆಳೆಸಿಕೊಳ್ಳಬೇಕು

ಮಳೆಗಾಲ ನಿಮಗೆ ಅಸಾಧ್ಯ ಸೆಖೆಯಿಂದ ಮುಕ್ತಿ ನೀಡುವುದೇನೋ ನಿಜ. ಆದರೆ ಹಲವು ಆರೋಗ್ಯ ಸಮಸ್ಯೆಗಳು ಇಡೀ ಮಳೆಗಾಲದಲ್ಲಿ ನಿಮ್ಮನ್ನು ಕಾಡುತ್ತಿರುತ್ತವೆ. ಸೋಂಕು ಅಥವಾ ಅಸ್ವಸ್ಥತೆಗಳು ಮಳೆಗಾಲದಲ್ಲಿ ಸಾಮಾನ್ಯ ಇದರಿಂದಾಗಿ ಅಗತ್ಯ ಪ್ರತಿರೋಧ ವ್ಯವಸ್ಥೆ ಅನಿವಾರ್ಯ. ಇಂಥ ಹವಾಮಾನ ಸಂದರ್ಭದ ಅಸ್ವಸ್ಥತೆಯಿಂದ ದೂರ ಇರಬೇಕಾದರೆ ನಮ್ಮ ಪ್ರತಿರೋಧ ಶಕ್ತಿಯನ್ನು ಬೆಳೆಸಿಕೊಳ್ಳಬೇಕು.

ಆಸ್ಟರ್ ಸಿಎಂಐ ಆಸ್ಪತ್ರೆಯ ಕ್ಲಿನಿಕ್ ನ್ಯೂಟ್ರೀಶನ್ ಮತ್ತು ಡಯಟಿಸ್ಟಿಕ್ ಸೇವೆಗಳ ವಿಭಾಗದ ಮುಖ್ಯಸ್ಥ ಡಾ.ಎಲ್ವಿನಾ ರಾಜ್ ನಮ್ಮ ಪ್ರತಿರೋಧ ವ್ಯವಸ್ಥೆಯನ್ನು ಬಲಗೊಳಿಸಲು ಮತ್ತು ಆರೋಗ್ಯಕರ ಮಳೆಗಾಲವನ್ನು ಆಸ್ವಾದಿಸಲು ಕೆಲ ಸಲಹೆಗಳನ್ನು ನೀಡಿದ್ದಾರೆ.

1. ಸಮತೋಲಿತ ಮತ್ತು ಪೌಷ್ಟಿಕಾಂಶ ಸಮೃದ್ಧ ಆಹಾರಕ್ರಮ

ಮಳೆಗಾಲದಲ್ಲಿ ಸಮತೋಲಿನ ಆಹಾರ ಕ್ರಮ ಅನುಸರಿಸುವುದು ಮೊದಲನೇ ಅಗತ್ಯ ಹಲವು ತರಕಾರಿ ಹಾಗೂ ಹಣ್ಣುಗಳು, ಇಡಿಯ ಕಾಳು, ಕ್ಷೀಣ ಪ್ರೊಟಿನ್ ನಿಮ್ಮ ಆಹಾರದ ಭಾಗವಾಗಬೇಕು. ಇವು ಹೆಚ್ಚಿನ ವಿಟಮಿನ್, ಖನಿಜಾಂಶ ಹೊಂದಿದ್ದು, ಇದು ನಿಮ್ಮ ಪ್ರತಿರೋಧ ರಕ್ಷಣಾ ವ್ಯವಸ್ಥೆಗೆ ಪೂರಕ. ಕಿತ್ತಳೆ, ಸೀಬೆ, ಕಿವಿ, ಪಪ್ಪಾಯಿ, ನಿಂಬೆ ಅಧಿಕ ವಿಟಮಿನ್ ಸಿ ಅಂಶವನ್ನು ಹೊಂದಿದ್ದು, ಇದು ಪ್ರತಿರೋಧ ಶಕ್ತಿ ಹೆಚ್ಚಿಸುತ್ತದೆ. ಅಂತೆಯೇ ಶುಂಠಿ, ಬೆಳ್ಳುಳ್ಳಿ ಮತ್ತು ಅರಿಸಿನ ಬ್ಯಾಕ್ಟೀರಿಯಾ ಪ್ರತಿರೋಧದ ಅಂಶವನ್ನು ಹೊಂದಿವೆ.

2. ಉತ್ತಮ ನೈರ್ಮಲ್ಯ ಅಭ್ಯಾಸ

ಮಳೆಗಾಲದಲ್ಲಿ ರೋಗ ಹರಡುವುದು ತಡೆಯಲು ಉತ್ತಮ ನೈರ್ಮಲ್ಯ ನಿರ್ವಹಿಸುವುದು ಅಗತ್ಯ ನಿಯತವಾಗಿ ಸೋಪ್‌ವಾಟರ್ ನಲ್ಲಿ



ಕೈತೊಳೆಯುತ್ತಿರಬೇಕು. ಅದರಲ್ಲೂ ಮುಖ್ಯವಾಗಿ ಊಟಕ್ಕೆ ಮುನ್ನ ಕೈ ತೊಳೆಯುವುದು ಅಪಾಯಕಾರಿ ವೈರಸ್‌ಗಳನ್ನು ಮತ್ತು ಬ್ಯಾಕ್ಟೀರಿಯಾಗಳನ್ನು ನಿರ್ಮೂಲನೆ ಮಾಡಲು ಹೆಚ್ಚು ಸಹಕಾರಿ. ಇಂಥ ವೈರಸ್ ಅಥವಾ ಬ್ಯಾಕ್ಟೀರಿಯಾಗಳು ಇರುವಾಗ ಮುಖ ಒರೆಸಿಕೊಂಡರು ಕೂಡಾ ನಿಮ್ಮ ಕಣ್ಣು ಮೂಗು ಬಾಯಿಯ ಮೂಲಕ ಸೋಂಕು ಹರಡುವ ಸಾಧ್ಯತೆ ಇರುತ್ತದೆ.

3. ಸಾಕಷ್ಟು ನಿದ್ದೆ ಹಾಗೂ ಒತ್ತಡ ನಿರ್ವಹಣೆಯೂ ಮುಖ್ಯ

ಇದನ್ನೂ ಓದಿ ನಿಯಮಿತ ವ್ಯಾಯಾಮದ ಹೊರತಾಗಿಯೂ ತೂಕ ಇಳಿಯುತ್ತಿಲ್ಲವೆ? ದಿನಚರಿ ಬದಲಿಸಿ

ರಾತ್ರಿಯ ವೇಳೆ ಏಳೆಂಟು ಗಂಟೆ ಸುಖನಿದ್ರೆ ಮಳೆಗಾಲದಲ್ಲಿ ಅಗತ್ಯ ನಿದ್ರಾಹೀನತೆ ನಿಮ್ಮ ಪ್ರತಿರಕ್ಷಣಾ ವ್ಯವಸ್ಥೆಯನ್ನು ಶಿಥಿಲಗೊಳಿಸುತ್ತದೆ ಹಾಗೂ ರೋಗಕಾರಕ ಅಂಶಗಳು ಹೆಚ್ಚಲು ಕಾರಣವಾಗುತ್ತದೆ. ಅಂತೆಯೇ ಅಧಿಕ ಒತ್ತಡ ಕೂಡಾ ನಿಮ್ಮ ಪ್ರತಿರಕ್ಷಣಾ ವ್ಯವಸ್ಥೆಗೆ ಮಾರಕ. ಉದ್ವಿಗ್ನತೆ ಕಡಿಮೆ ಮಾಡಿಕೊಂಡು ಧ್ಯಾನ, ಸುಧೀರ್ಘ ಉಸಿರಾಟದ ಅಭ್ಯಾಸ ಅಥವಾ ಯೋಗದ ಮೂಲಕ ಇದನ್ನು ನಿಭಾಯಿಸಬಹುದಾಗಿದೆ.

4. ನಿಯತ ದೈಹಿಕ ವ್ಯಾಯಾಮ ಕೂಡಾ ನಿಮ್ಮ ಪ್ರತಿರಕ್ಷಣಾ ವ್ಯವಸ್ಥೆಗೆ ಪೂರಕ.

ಸಮತೋಲಿತ ಮತ್ತು ಪೌಷ್ಟಿಕಾಂಶ ಸಮೃದ್ಧ ಆಹಾರಕ್ರಮವು ಕಾರ್ಬೋಹೈಡ್ರೇಟ್‌ಗಳು, ಪ್ರೋಟೀನ್, ಆರೋಗ್ಯಕರ ಕೊಬ್ಬುಗಳು, ವಿಟಮಿನ್‌ಗಳು, ಖನಿಜಗಳು ಮತ್ತು ನಾರಿನಂಶವನ್ನು ಒಳಗೊಂಡಿರುತ್ತದೆ, ಇದು ದೇಹಕ್ಕೆ ಅಗತ್ಯವಾದ ಶಕ್ತಿ ಮತ್ತು ದೀರ್ಘಕಾಲೀನ ಆರೋಗ್ಯವನ್ನು ಒದಗಿಸುತ್ತದೆ. ದೈನಂದಿನ ಆಹಾರದಲ್ಲಿ ತಾಜಾ ತರಕಾರಿಗಳು, ಹಣ್ಣುಗಳು, ಧಾನ್ಯಗಳು, ಬೇಳೆಕಾಳುಗಳು ಮತ್ತು ಸಾಕಷ್ಟು ನೀರನ್ನು ಸೇರಿಸುವುದು ಒಟ್ಟಾರೆ ಆರೋಗ್ಯಕ್ಕೆ ಅತ್ಯಗತ್ಯ.

## ಸಮತೋಲಿತ ಆಹಾರದ ಪ್ರಮುಖ ಅಂಶಗಳು:

ಕಾರ್ಬೋಹೈಡ್ರೇಟ್‌ಗಳು (ಶಕ್ತಿಗಾಗಿ): ಧಾನ್ಯಗಳು, ದವಸ ಧಾನ್ಯಗಳು ಮತ್ತು ಪಿಷ್ಟ ತರಕಾರಿಗಳು ಶಕ್ತಿಯನ್ನು ಒದಗಿಸುತ್ತವೆ.

ಪ್ರೋಟೀನ್ (ಸ್ನಾಯುಗಳ ಬೆಳವಣಿಗೆಗೆ): ಬೇಳೆಕಾಳುಗಳು, ದ್ವಿದಳ ಧಾನ್ಯಗಳು, ಮೀನು, ಮೊಟ್ಟೆ, ಕೋಳಿ, ಮತ್ತು ತೋಫು ಪ್ರೋಟೀನ್‌ನ ಉತ್ತಮ ಮೂಲಗಳು.

ಆರೋಗ್ಯಕರ ಕೊಬ್ಬುಗಳು (ಮೆದುಳಿನ ಕಾರ್ಯಕ್ಕೆ): ಆವಕಾಡೊ, ಬೀಜಗಳು, ಮತ್ತು ಆಲಿವ್ ಎಣ್ಣೆ ಮುಂತಾದವುಗಳನ್ನು ಮಿತವಾಗಿ ಬಳಸುವುದು ಉತ್ತಮ.

ವಿಟಮಿನ್‌ಗಳು ಮತ್ತು ಖನಿಜಗಳು (ರೋಗನಿರೋಧಕ ಶಕ್ತಿ): ವೈವಿಧ್ಯಮಯ ತರಕಾರಿಗಳು ಮತ್ತು ಹಣ್ಣುಗಳು ವಿಟಮಿನ್‌ಗಳು ಮತ್ತು ಖನಿಜಗಳ ಪೂರೈಕೆಯನ್ನು ಖಚಿತಪಡಿಸುತ್ತವೆ.

ನಾರಿನಂಶ (ಜೀರ್ಣಕ್ರಿಯೆಗೆ): ಫೈಬರ್ ಭರಿತ ಆಹಾರಗಳು ಜೀರ್ಣಕ್ರಿಯೆಗೆ ಸಹಾಯ ಮಾಡುತ್ತವೆ.

## ಪೌಷ್ಟಿಕ ಆಹಾರದ ಮಾರ್ಗಸೂಚಿಗಳು:

ತಟ್ಟೆಯ ಸಮತೋಲನ: ಪ್ರತಿ ಊಟದಲ್ಲಿ ಪ್ರೋಟೀನ್, ಕಾರ್ಬೋಹೈಡ್ರೇಟ್‌ಗಳು ಮತ್ತು ಆರೋಗ್ಯಕರ ಕೊಬ್ಬುಗಳನ್ನು ಸೇರಿಸಿಕೊಳ್ಳಿ.

ತರಕಾರಿ ಮತ್ತು ಹಣ್ಣುಗಳು: ಪ್ರತಿದಿನ ಸಾಕಷ್ಟು ತಾಜಾ ಹಣ್ಣುಗಳು ಮತ್ತು ತರಕಾರಿಗಳನ್ನು ಸೇವಿಸಿ.

ಮಿತಗೊಳಿಸುವುದು: ಸಂಸ್ಕರಿಸಿದ ಆಹಾರಗಳು, ಸಕ್ಕರೆ ಪಾನೀಯಗಳು, ಮತ್ತು ಅಧಿಕ ಕೊಬ್ಬಿನಂಶವಿರುವ ಪದಾರ್ಥಗಳನ್ನು ಕಡಿಮೆ ಮಾಡಿ.

ಜಲಸಂಯೋಜನೆ: ದಿನವಿಡೀ ಸಾಕಷ್ಟು ನೀರು ಕುಡಿಯುವುದು ಅವಶ್ಯಕ.

ಭಾಗದ ನಿಯಂತ್ರಣ: ಹಸಿವಿನ ಪ್ರಮಾಣಕ್ಕೆ ಅನುಗುಣವಾಗಿ, ಅತಿಯಾಗಿ ತಿನ್ನದೆ, ಸಮತೋಲಿತ ಪ್ರಮಾಣದಲ್ಲಿ ಊಟ ಮಾಡಿ.

ಈ ರೀತಿಯ ಆಹಾರ ಪದ್ಧತಿಯು ದೀರ್ಘಕಾಲದ ಕಾಯಿಲೆಗಳನ್ನು ತಡೆಗಟ್ಟಲು ಮತ್ತು ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಹೆಚ್ಚಿಸಲು ಸಹಕಾರಿಯಾಗಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

## ಸಣ್ ಸುದ್ದಿ

**ಮೇ 10ರಂದು "ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ"**

ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತುಮಕೂರು ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಜಿಲ್ಲಾ ರೆಡ್ಡಿ ಜನಸಂಘದ ವತಿಯಿಂದ ಮೇ 10ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ "ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಅವರ ಘನ ಉಪಸ್ಥಿತಿಯಲ್ಲಿ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ತುಮಕೂರಿನ ಚಿಕ್ಕಪೇಟೆಯ ಹಿರೇಮಠದ ಮಠಾಧ್ಯಕ್ಷರಾದ ಡಾ: ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸುವರು. ನಗರ ಶಾಸಕ ಜಿ.ಬಿ. ಜ್ಯೋತಿ ಗಣೇಶ್ ಅಧ್ಯಕ್ಷತೆವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಶಾಸಕರು, ಜನಪ್ರತಿನಿಧಿಗಳು, ತುಮಕೂರು ಜಿಲ್ಲೆಯ ರೆಡ್ಡಿ ಸಮುದಾಯದ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಹಾಗೂ ಮುಖಂಡರು ಭಾಗವಹಿಸುವರು.

# ಚಿಕ್ಕನಹಳ್ಳಿ : ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ದಾಖಲಾತಿ ಪ್ರಾರಂಭ

ಸೂರ್ಯಪ್ರಗತಿ ನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಶಿರಾ ತಾಲೂಕು ಚಿಕ್ಕನಹಳ್ಳಿಯಲ್ಲಿರುವ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ ಸಾಲಿನ ದಾಖಲಾತಿ ಪ್ರಾರಂಭವಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ. ಸಾಮಾನ್ಯ ವಿದ್ಯಾರ್ಥಿಗಳು ಪಿಯುಸಿಯಲ್ಲಿ ಕನಿಷ್ಟ ಶೇ. 50 ಅಂಕ ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1/ ವಿಕಲಚೇತನ ವಿದ್ಯಾರ್ಥಿಗಳು ಕನಿಷ್ಟ ಶೇ. 45ರಷ್ಟು ಅಂಕ ಗಳಿಸಿರಬೇಕು. ವಿದ್ಯಾರ್ಥಿಗಳಿಗೆ ಡಿ.ಇಎಲ್. ಇಡಿ ತರಬೇತಿ ಪಡೆದ ನಂತರ 1 ರಿಂದ 5ನೇ ತರಗತಿ ಹಾಗೂ ಪದವೀದರ ವಿದ್ಯಾರ್ಥಿಗಳಿಗೆ 6 ರಿಂದ 8ನೇ ತರಗತಿವರೆಗೆ ಬೋಧನೆ ಮಾಡಲು ಅವಕಾಶವಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶಾವಕಾಶವಿದ್ದು, ಸಾಮಾನ್ಯ ವಿದ್ಯಾರ್ಥಿಗಳಿಗೆ 3500 ರೂ.ಗಳ ಪ್ರವೇಶ ಶುಲ್ಕವನ್ನು ನಿಗಧಿಪಡಿಸಲಾಗಿದೆ. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ 25000 ರೂ.ಗಳ ವಿದ್ಯಾರ್ಥಿವೇತನ ನೀಡಲಾಗುವುದು. ದಾಖಲಾತಿ ಪಡೆಯಲು ಮೇ 29 ಕಡೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂ. 9448842574, 9741507942, 9980870260, 9448175537, 9980578820, 9900862992, 9480250487ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ ಪ್ರಾಂಶುಪಾಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 10ರಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ನಗರ ಉಪವಿಭಾಗ-1ರಲ್ಲಿ ರಾಷ್ಟ್ರೀಯ ಹೆದ್ದಾರಿ ಅಗಲೀಕರಣ ಕಾಮಗಾರಿ ಕೈಗೊಂಡಿರುವುದರಿಂದ ಮೇ 10ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ರಂಗಾಪುರ, ಲಿಂಗಾಪುರ, ಬಾಲಾಜಿ ಲೇಔಟ್, ಅಣ್ಣೇನಹಳ್ಳಿ, ತಿಮ್ಮಲಾಪುರ, ನರಸಾಪುರ, ಮಲ್ಲೇನಹಳ್ಳಿಯಲ್ಲಿ ಮಧ್ಯಂತರ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾಗರಾಜು ಹೆಚ್.ಪಿ. ಮನವಿ ಮಾಡಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ಎತ್ತಿನಹೊಳೆ: ದಾರಿತಪ್ಪಿಸುವ ಹೇಳಿಕೆ



ದಿ: 18-04-2026ರಂದು ಎತ್ತಿನಹೊಳೆ ಯೋಜನೆಯ ಮುಖ್ಯ ಇಂಜಿನಿಯರ್‌ರವರು ಕೆಲವು ಜನಪ್ರತಿನಿಧಿಗಳ ಜೊತೆ ತುಮಕೂರಿನಲ್ಲಿ ಸಭೆ ನಡೆಸಿ, 2026ರಲ್ಲಿ ಬಾಕಿ ಇರುವ ಎಲ್ಲಾ ಕಾಮಗಾರಿಯನ್ನು ಪೂರ್ಣಗೊಳಿಸಿ, ನಾಲೆಯಲ್ಲಿ ನೀರು ಹರಿಸುವುದಾಗಿ ಹೇಳಿಕೆ ಕೊಟ್ಟಿರುತ್ತಾರೆ. ಇದು ಸಾಧ್ಯವೇ ಎನ್ನುವ ಅನುಮಾನ ಕಾಡಲಾರಂಭಿಸಿದೆ. ಕಾರಣ ಕೋಲಾರ, ಬೆಂಗಳೂರು, ಚಿಕ್ಕಬಳ್ಳಾಪುರ ಜಿಲ್ಲೆಗೆ ನಿಗಧಿಯಾಗಿರುವ ನೀರು ಹರಿಸಲು ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕು, ಕೋಳಾಲ ಹತ್ತಿರವಿರುವ ಭೈರಗೊಂಡ್ಲುವಿನಲ್ಲಿ 5.75 ಟಿ.ಎಂ.ಸಿ. ಸಾಮರ್ಥ್ಯದ ಜಲಾಶಯ ನಿರ್ಮಿಸಲು ನಿರ್ಧರಿಸಿ ಅದು ಟೆಂಡರ್ ಸಹ ಆಗಿತ್ತು. ನಂತರದ ದಿನಗಳಲ್ಲಿ ಅದನ್ನು ರದ್ದುಪಡಿಸಿ ದೊಡ್ಡಬಳ್ಳಾಪುರ ತಾಲ್ಲೂಕು, ಮಚ್ಚೇನಹಳ್ಳಿ, ಶ್ರೀರಾಮನಹಳ್ಳಿ ಹತ್ತಿರ, 1.75 ಟಿ.ಎಂ.ಸಿ. ಸಾಮರ್ಥ್ಯದ ಜಲಾಶಯ ನಿರ್ಮಿಸಲು ಡಿ.ಪಿ.ಆರ್. ತಯಾರಿಸಲಾಯಿತು. ಆದರೆ ಸರ್ಕಾರ ಮತ್ತು ನೀರಾವರಿ ಇಲಾಖೆ ಇದುವರೆವಿಗೂ ಯಾವುದೇ ನಿರ್ದಿಷ್ಟವಾದ ನಿರ್ಧಾರ ತೆಗೆದುಕೊಳ್ಳದೆ ಮುಂದೂಡಿಕೊಂಡು ಹೋಗುತ್ತಿರುವುದು ಎಷ್ಟು ಸರಿ. ಹೀಗಿರುವಾಗ ಈ ವರ್ಷದ ಕೊನೆಯಲ್ಲಿ ಎತ್ತಿನಹೊಳೆ ಯೋಜನೆಯ ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ ನೀರು ಹರಿಸುವ ಹೇಳಿಕೆ ನೀಡಿರುವುದು ಜನರನ್ನು ದಾರಿ ತಪ್ಪಿಸುವ ಹೇಳಿಕೆಯಾಗಿದೆ ಎಂದು ಆರೋಪಿಸಿದರು.

ನನಗಿರುವ ಮಾಹಿತಿ ಪ್ರಕಾರ, ಸರಪಳಿ 0.0 ಕಿ.ಮೀ (ಡೆಲಿವರಿ ಚೇಂಬರ್)ನಿಂದ 275 ಕಿ.ಮೀ. ವರೆಗೆ (ನೀರು ಸಂಗ್ರಹಣಾ ಜಲಾಶಯ) ಅಲ್ಲಲ್ಲಿ ಇನ್ನೂ ಸಹ ಕಾಮಗಾರಿಗಳು ಪೂರ್ಣಗೊಂಡಿರುವುದಿಲ್ಲ. ಹೀಗಿರುವಾಗ ನಿಖರವಾದ ಹೇಳಿಕೆ ನೀಡದೆ ಜನರಿಗೆ ಸುಳ್ಳು ಆಶ್ವಾಸನೆಯ ಹೇಳಿಕೆ ಕೊಡುವುದು ಸರಿಯಲ್ಲ. ಸರ್ಕಾರ ತುರ್ತಾಗಿ ಈ ಯೋಜನೆಯತ್ತ ಗಮನಹರಿಸಿ, ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಒಂದು ವರ್ಷದೊಳಗೆ ನೀರು ಹರಿಸದಿದ್ದರೆ ರೈತರು ಮತ್ತು ಜನರ ಸಹಕಾರದೊಂದಿಗೆ ಹೋರಾಟ ಮಾಡಬೇಕಾಗುತ್ತದೆ ಎಂದು ಸೊಗಡು ಶಿವಣ್ಣ ಎಚ್ಚರಿಕೆ ನೀಡಿದರು.

ಮಹಾನಗರ ಪಾಲಿಕೆ ಮಾಜಿ ಸದಸ್ಯ ಕೆ.ಪಿ.ಮಹೇಶ್, ಸಾಮಾಜಿಕ ಹೋರಾಟಗಾರ ಪ್ರಭಾಕರ್ ಮ್ಯಾಸನಾಯಕ, ಎನ್.ಆರ್. ಶ್ರೀಕಾಂತ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ವೃತ್ತಿ ಜೀವನದ ಯಶಸ್ಸಿಗೆ ಶಿಸ್ತು, ತಾಳ್ಮೆ, ಸಮಯ ಪ್ರಜ್ಞೆ ಅವಶ್ಯ

ಸೂರ್ಯಪ್ರಗತಿ ನ್ಯೂಸ್.ಕಾಂ




ತುಮಕೂರು : ವಿದ್ಯಾರ್ಥಿಗಳು ವೃತ್ತಿ ಜೀವನಕ್ಕೆ ಕಾಲಿಟ್ಟಾಗ ಎಂದಿಗೂ ಹಣದ ಹಿಂದೆ ಓಡಬೇಡಿ, ಕೇವಲ ಹಣಕ್ಕಾಗಿ ದುಡಿಯದೆ ನಿಮ್ಮ ಯಶಸ್ಸಿಗಾಗಿ ದುಡಿಯಿರಿ ಆಗ ಹಣವು ತಾನಾಗೇ ನಿಮ್ಮ ಹಿಂದೆ ಬರುತ್ತದೆ ಎಂದು ಇನ್ಫೋಸಿಸ್‌ನ ಸಹಾಯಕ ಉಪಾಧ್ಯಕ್ಷ ಹಾಗೂ ಉತ್ಪನ್ನ ವಿಭಾಗದ ವ್ಯವಸ್ಥಾಪಕರಾದ ನರೇಶ್ ಕುಮಾರ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಟೆಕ್ನೋಡಿಯಾ 2026ರನ್ನು ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ವೃತ್ತಿಜೀವನದಲ್ಲಿ ಯಶಸ್ವಿಯಾಗಬೇಕಾದರೆ ಶಿಸ್ತು, ತಾಳ್ಮೆ, ಸಮಯಪ್ರಜ್ಞೆಯನ್ನು ಅಳವಡಿಸಿಕೊಳ್ಳುವುದು ಬಹಳ ಮುಖ್ಯ, ಉದ್ಯಮದಲ್ಲಿ ಗ್ರಾಹಕರಿಗೆ ಮೊದಲ ಆದ್ಯತೆ ನೀಡುವುದು ಪ್ರಮುಖವಾಗಿರುತ್ತದೆ, ಗ್ರಾಹಕರ ಹಿತಾದೃಷ್ಟಿ ಒಂದು ಉದ್ಯಮದ ಯಶಸ್ವಿಗೆ ಕಾರಣವಾಗಿರುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಎಐ ಇಂದು ಎಲ್ಲಾ ವಿಭಾಗದಲ್ಲೂ ಕಾರ್ಯನಿರ್ವಹಿಸುತ್ತಿರುವುದರಿಂದ ಅದರ ಮೇಲೆ ಹೆಚ್ಚು ಅವಲಂಬಿತರಾಗದೆ ನಿಮ್ಮ ಕೌಶಲ್ಯವನ್ನು ಹೆಚ್ಚಿಸಿಕೊಂಡು ವೃತ್ತಿ ಜೀವನವನ್ನು ಉನ್ನತ ಮಟ್ಟಕ್ಕೇರಿಸಬಹುದು. ಜೀವನದಲ್ಲಿ ಏನಾಗಬೇಕೆನ್ನುವುದನ್ನು ಇಂದೇ ತೀರ್ಮಾನಿಸಿ ಅದರಂತೆ ಯೋಜನೆಗಳನ್ನು ರೂಪಿಸಿಕೊಳ್ಳಿ. ವಿದ್ಯಾರ್ಥಿಗಳು ವಿಭಿನ್ನವಾಗಿ ಯೋಚಿಸಿದಾಗ ಮಾತ್ರ ಸ್ಪರ್ಧಾತ್ಮಕಯುಗದಲ್ಲಿ ಗುರುತಿಸಿಕೊಳ್ಳಲು ಸಾಧ್ಯ ಎಂದು ವಿದ್ಯಾರ್ಥಿಗಳೊಂದಿಗೆ ತಮ್ಮ ಅನುಭವವನ್ನು ಹಂಚಿಕೊಂಡರು.

ಸಾಹೇ ವಿವಿಯ ಕುಲಸಚಿವರಾದ ಡಾ. ಅಶೋಕ್ ಮೆಹ್ತ ಮಾತನಾಡಿ ಟೆಕ್ನೋಡಿಯಾ ಕಾರ್ಯಕ್ರಮವು ವಿದ್ಯಾರ್ಥಿಗಳು ಸಂಶೋಧನೆ ಮಾಡಿದ ಪ್ರಾಜೆಕ್ಟ್‌ಗಳ ಪ್ರದರ್ಶನಕ್ಕೆ ಇದೊಂದು ಅತ್ಯುತ್ತಮವಾದ ವೇದಿಕೆಯಾಗಿದೆ. ಈ ವಸ್ತು ಪ್ರದರ್ಶನದ ಮೂಲಕ ನಿಮ್ಮ ವಿಭಿನ್ನ ವಿಚಾರಗಳನ್ನು ಮತ್ತೊಬ್ಬರೊಂದಿಗೆ ಹಂಚಿಕೊಳ್ಳಬಹುದು. ಈ ಟೆಕ್ನೋಡಿಯಾ ಕಾರ್ಯಕ್ರಮದಲ್ಲಿ ನೀವು ಸಿದ್ಧಪಡಿಸಿದ ಪ್ರಾಜೆಕ್ಟ್‌ಗಳನ್ನು ಪ್ರದರ್ಶನಕ್ಕಿಟ್ಟು ಅದನ್ನು ವಿವರಿಸುವುದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಿಸಿಕೊಳ್ಳಬಹುದಾಗಿದೆ ಜೊತೆಗೆ ವಿವಿಧ ಕ್ಷೇತ್ರದ ಸಂಪನ್ಮೂಲ ವ್ಯಕ್ತಿಗಳ ಸಂಪರ್ಕ ಬೆಳೆಯುತ್ತದೆ ಎಂದು ಹೇಳಿದರು.

ಎಸ್ ಎಸ್ ಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹಾಂತೇಶ್ ಎಂ. ನಡಕಟ್ಟಿ ಮಾತನಾಡಿ ವಿದ್ಯಾರ್ಥಿಗಳ ಕೌಶಲ್ಯ ಪ್ರದರ್ಶನಕ್ಕೆ ಈ ಟೆಕ್ನೋಡಿಯಾ ಕಾರ್ಯಕ್ರಮ ಅತ್ಯುತ್ತಮ ಅವಕಾಶವಾಗಿದೆ. ಎಐ ಎಂಬುದು ಇಂದು ಎಲ್ಲಾ ಕ್ಷೇತ್ರವನ್ನು ಆವರಿಸಿಕೊಳ್ಳುತ್ತಿದೆ. ವಿದ್ಯಾರ್ಥಿಗಳು ಎಐ ಮೇಲೆ ತುಂಬಾ ಅವಲಂಬಿತರಾಗಿ ನಿಮ್ಮ ಕ್ರಿಯಾಶೀಲತೆಯನ್ನು ಹಾಳುಮಾಡಿಕೊಳ್ಳಬೇಡಿ. ನಿಮ್ಮ ಹಿಡಿತದಲ್ಲಿ ಎಐ ಇರಬೇಕೇ ವಿನಃ ನೀವು ಎಐನ ಹಿಡಿತದಲ್ಲಿ ಇರಬಾರದು ಎಐ ಅನ್ನು ನಿಮ್ಮ ಒಂದು ಸಾಧನವನ್ನಾಗಿ ಬಳಸಿಕೊಳ್ಳಿ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಸಾಹೇ ವಿವಿಯ ಪರೀಕ್ಷಾಂಗ ನಿಯಂತ್ರಕರಾದ ಡಾ. ಕೆ. ಸುನಿಲ್, ಅಕಾಡೆಮಿಕ್ ಡೀನ್ ಡಾ. ಎಸ್ ರೇಣುಕಾಲತಾ, ಎಸ್‌ಎಸ್‌ಎಸ್‌ಇ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಂಜೀವ್‌ಕುಮಾರ್, ಕಾರ್ಯಕ್ರಮದ ಸಂಯೋಜಕರಾದ ಡಾ. ಮನು, ಗುರುನಂದನ್ ಹಾಗೂ ಕಾಲೇಜಿನ ಎಲ್ಲಾ ವಿಭಾಗದ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಬ್ಯಾಂಕ್ ಸಿಬ್ಬಂದಿಗಳಿಗೆ ಬ್ಯಾಂಕ್‌ಗಳಲ್ಲಿ ಹೆಚ್ಚಿನ ಭದ್ರತೆ



ಸೂರ್ಯಪ್ರಗತಿ ನ್ಯೂಸ್.ಕಾಂ

ಕೊರಟಗೆರೆ:ಇತ್ತೀಚಿನ ದಿನಗಳಲ್ಲಿ ರಾಜ್ಯದಾದ್ಯಂತ ಕಳ್ಳತನ ಪ್ರಕರಣಗಳು ಹೆಚ್ಚುತ್ತಿರುವ ಕುರಿತು ಕಳ್ಳತನ ಹಾಗೂ ವಂಚನೆ ಪ್ರಕರಣ ತಡೆಗಟ್ಟುವ ನಿಟ್ಟಿನಲ್ಲಿ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ವಿವಿಧ ಬ್ಯಾಂಕ್ ಸಿಬ್ಬಂದಿ ಯಾರೊಂದಿಗೆ ಮಹತ್ವದ ಸಭೆಯನ್ನು ನಡೆಯಿತು. ಸಭೆಯಲ್ಲಿ ಎಟಿಎಂ ಭದ್ರತೆ ಮತ್ತು ಕಳ್ಳತನಕ್ಕೆ ಮುಂದಾದಾಗ ಅಲಾರಂ ಹಾಗೂ ಮೊಬೈಲ್ ಗೆ ಸಂದೇಶ ಬರುವಂತೆ ಹಾಗೂ ಭದ್ರತಾ ಪಾಲನೆ ಕುರಿತು ಪೊಲೀಸ್ ಇಲಾಖೆ ಹಲವು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಸಭೆಯನ್ನುದ್ದೇಶಿಸಿ ಸಿಪಿಐ ಅಪೀಲ್ ಎಟಿಎಂ ಹಾಗೂ ಬ್ಯಾಂಕ್ ಗಳಿಗೆ ಗುಣಮಟ್ಟದ ಸಿಸಿಟಿವಿ ಕ್ಯಾಮೆರಾಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಸೂಚಿಸಿದರು. ಕ್ಯಾಮೆರಾಗಳು 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು ಹಾಗೂ ರೆಕಾಡಿರ್‌ಂಗ್ ವ್ಯವಸ್ಥೆಯನ್ನು ನಿಯಮಿತವಾಗಿ ಪರಿಶೀಲನೆ ಮಾಡಬೇಕು ಎಂದು ಹೇಳಿದರು. ಬ್ಯಾಂಕ್ ಹಾಗೂ ಎಟಿಎಂ ಗಳಿಗೆ ಬರುವ ಪ್ರತಿಯೊಬ್ಬರ ಚಲನ ವಲನ ಗುರುತಿಸಿ ನಿಗಾ ವಹಿಸುವುದು ಕಡ್ಡಾಯವಾಗಿ ಮಾಡಬೇಕು ಎಂದರು.

ಸಭೆಯಲ್ಲಿ ಬ್ಯಾಂಕ್ ಸಿಬ್ಬಂದಿಗಳಾದ ರಾಜಗಿರೀಶ್ ಬಾಬು,ತಿಮ್ಮರಾಜು, ಮಂಜುನಾಥ್ ಹಾಗೂ ಎಸ್ ಬಿ ಐ ಬ್ಯಾಂಕ್ ಕೆಜಿಬಿ ಡಿಸಿಸಿ ಬ್ಯಾಂಕ್ ನ ಸಿಬ್ಬಂದಿಗಳು ಸೇರಿದಂತೆ ಎಲ್ಲಾ ಬ್ಯಾಂಕ್‌ನ ಸಿಬ್ಬಂದಿಗಳು ಇದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ತುಮಕೂರಿನಲ್ಲಿ ಹೆಚ್ಚಾಯ್ತು ಹಕ್ಕಿ ಜ್ವರದ ಭೀತಿ: 50ಕ್ಕೂ ಹೆಚ್ಚು ನವಿಲುಗಳ ಸಾವು!

ಸೂರ್ಯಪ್ರಗತಿ ನ್ಯೂಸ್.ಕಾಂ



ತುಮಕೂರಿನಲ್ಲಿ ನವಿಲುಗಳ ಸಾವು 54ಕ್ಕೆ ಏರಿಕೆಯಾಗಿದ್ದು, ಹಕ್ಕಿ ಜ್ವರದ ಭೀತಿ ಹೆಚ್ಚಾಗಿದೆ. ಜಿಲ್ಲೆಯಲ್ಲಿ ಹಿಂದೆ ಕೋಳಿಗಳು ಮತ್ತು ನವಿಲುಗಳ ಸರಣಿ ಸಾವು ಸಂಭವಿಸಿತ್ತು. ನವಿಲುಗಳ ಸಾವಿಗೆ ಹಕ್ಕಿ ಜ್ವರವೇ ಕಾರಣವೆಂಬುದು ದೃಢಪಟ್ಟಿತ್ತು. ಆದರೆ ಬೊಮ್ಮನಹಳ್ಳಿಯ ಕೋಳಿಗಳ ವೈದ್ಯಕೀಯ ವರದಿ ನೆಗೆಟಿವ್ ಬಂದಿರುವುದು ಸಮಾಧಾನದ ಸಂಗತಿಯಾಗಿದ್ದರೂ, ಕುಣಿಗಲ್ ನಲ್ಲಿ ಮತ್ತೊಮ್ಮೆ ನವಿಲಿನ ಕಳೆಬರ ಪತ್ತೆಯಾದ ಕಾರಣ ಅಧಿಕಾರಿಗಳು ಹೈ ಅಲರ್ಟ್ ಘೋಷಿಸಿದ್ದಾರೆ.

ಜಿಲ್ಲೆಯಲ್ಲಿ ಹಕ್ಕಿ ಜ್ವರದ (ಏಡಿಜ ಈಟಣ) ಭೀತಿ ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇದೆ. ಕೆಲ ದಿನಗಳ ಹಿಂದೆಯಷ್ಟೇ 44 ನವಿಲುಗಳು ಮತ್ತು 30 ಕೋಳಿಗಳು ಸಾವನ್ನಪ್ಪಿದ್ದವು. ನವಿಲುಗಳ ಸಾವಿಗೆ ಹಕ್ಕಿ ಜ್ವರವೇ ಕಾರಣವೆಂದು ಲ್ಯಾಬ್ ವರದಿಯಲ್ಲಿ ದೃಢಪಟ್ಟಿತ್ತು. ಕೋಳಿಗಳ ಸಾವಿಗೆ ಸಂಬಂಧಿಸಿದಂತೆ ಸ್ಯಾಂಪಲ್‌ಗಳನ್ನು ಪರೀಕ್ಷೆಗೆ ಕಳುಹಿಸಲಾಗಿತ್ತು. ಇದರ ಬೆನ್ನಲ್ಲೇ ಈಗ ಮತ್ತಷ್ಟು ನವಿಲುಗಳು ಸಾವನ್ನಪ್ಪಿದ್ದು, ಸಾರ್ವಜನಿಕರಲ್ಲಿ ಭಾರೀ ಆತಂಕ ಮೂಡಿಸಿದೆ.

ಪಶುಸಂಗೋಪನಾ ಇಲಾಖೆ ಮುನ್ನೆಚ್ಚರಿಕೆ

ನವಿಲುಗಳ ನಿರಂತರ ಸಾವಿನ ಬೆನ್ನಲ್ಲೇ ಪಶುಸಂಗೋಪನಾ ಇಲಾಖೆ ಅಲರ್ಟ್ ಘೋಷಿಸಿದೆ. ಜಿಲ್ಲೆಯಾದ್ಯಂತ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ಹಕ್ಕಿಗಳ ಚಲನವಲನದ ಮೇಲೆ ನಿಗಾ ಇಡುವಂತೆ ಸೂಚನೆ ನೀಡಲಾಗಿದೆ. ಕಾಡುಪ್ರಾಣಿಗಳು ಹಾಗೂ ಹಕ್ಕಿಗಳ ಸಾವಿನ ಬಗ್ಗೆ ಮಾಹಿತಿ ಸಿಕ್ಕ ತಕ್ಷಣ ವರದಿ ಮಾಡಲು ತಿಳಿಸಲಾಗಿದೆ.

ಕೋಳಿಗಳ ಸಾವಿಗೆ ಹಕ್ಕಿ ಜ್ವರ ಕಾರಣವಲ್ಲ

ಇನ್ನೊಂದೆಡೆ, ತುಮಕೂರು ತಾಲೂಕಿನ ಬೊಮ್ಮನಹಳ್ಳಿಯ ಕೋಳಿ ಫಾರಂನಲ್ಲಿ ಏಕಕಾಲಕ್ಕೆ ಸುಮಾರು 30ಕ್ಕೂ ಹೆಚ್ಚು ಕೋಳಿಗಳು ಸಾವನ್ನಪ್ಪಿದ್ದವು. ಹಕ್ಕಿ ಜ್ವರದ ಭೀತಿಯ ನಡುವೆ ಈ ಘಟನೆ ಗ್ರಾಮಸ್ಥರನ್ನು ಕಂಗಾಲಾಗಿಸಿತ್ತು. ತಕ್ಷಣವೇ ಮೃತ ಕೋಳಿಗಳ ಸ್ಯಾಂಪಲ್‌ಗಳನ್ನು ವೈದ್ಯಕೀಯ ಪರೀಕ್ಷೆಗೆ ರವಾನಿಸಲಾಗಿತ್ತು. ಇದೀಗ ವರದಿ ಬಂದಿದ್ದು, ಕೋಳಿಗಳಲ್ಲಿ ಹಕ್ಕಿ ಜ್ವರ ಪತ್ತೆಯಾಗಿಲ್ಲ (ಓಜರಚಿಣುತಜ) ಎಂದು ದೃಢಪಟ್ಟಿದೆ. ಇದರಿಂದ ಕೋಳಿ ಫಾರಂ ಮಾಲೀಕರು ಹಾಗೂ ಸ್ಥಳೀಯರು ಕೊಂಚ ನಿಟ್ಟುಸಿರು ಬಿಟ್ಟಿದ್ದಾರಾದರೂ, ನವಿಲುಗಳ ಸಾವು ಇನ್ನೂ ನಿಗೂಢವಾಗಿಯೇ ಇರುವುದು ಚಿಂತೆಯನ್ನು ಹೆಚ್ಚಿಸಿದೆ.

# ಸಾಕ್ಷರತಾ ವೇದಿಕೆಯಿಂದ ಬಿ ಎಂ ಎಸ್ ಕಾಲೇಜಿನಲ್ಲಿ ಉಚಿತ ಕಂಪ್ಯೂಟರ್ ತರಬೇತಿ

ಸೂರ್ಯಪ್ರಗತಿ ನ್ಯೂಸ್.ಕಾಂ



ಹುಳಿಯಾರು : ಬಿ ಎಂ ಎಸ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಉದ್ಯೋಗ ಮಾಹಿತಿ ಮತ್ತು ತರಬೇತಿ ಕೋಶದ ಕಂಪ್ಯೂಟರ್ ಸಾಕ್ಷರತಾ ವೇದಿಕೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಉಚಿತ ಕಂಪ್ಯೂಟರ್ ತರಬೇತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಶುಕ್ರವಾರ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಕಳೆದ ಮೂರು ವರ್ಷಗಳಿಂದ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತವಾಗಿ ಕಂಪ್ಯೂಟರ್ ಕೌಶಲ ತರಬೇತಿಯನ್ನು ನೀಡುತ್ತಿರುವ ಕಾಲೇಜು, ಈ ಸಾಲಿನ ಮೂರನೇ ವರ್ಷದ ತರಬೇತಿಯ ಮೊದಲ ಹಂತದಲ್ಲಿ 16 ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ಪ್ರದಾನ ಮಾಡಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ವೀರಣ್ಣ ಎಸ್ ಸಿ ವಿದ್ಯಾರ್ಥಿಗಳಲ್ಲಿ ಪಠ್ಯದ ಜ್ಞಾನ ಮಾತ್ರವಲ್ಲದೆ, ಪ್ರಾಯೋಗಿಕ ಕೌಶಲಗಳ ಬೆಳವಣಿಗೆಯೂ ಅಗತ್ಯವಾಗಿದೆ. ಇಂತಹ ತರಬೇತಿಗಳ ಮೂಲಕ ವಿದ್ಯಾರ್ಥಿಗಳನ್ನು ಭವಿಷ್ಯದ ಉದ್ಯೋಗ ಕ್ಷೇತ್ರಕ್ಕೆ ಸಜ್ಜುಗೊಳಿಸುವುದು ಕಾಲೇಜಿನ ಉದ್ದೇಶವಾಗಿದೆ, ಎಂದು ತಿಳಿಸಿದರು.

ಐಕ್ಯೂಎಸಿ ಸಂಯೋಜಕರಾದ ಡಾ. ಸರಸ್ವತಿ ಕೆ.ಬಿ. ಅವರು ಮಾತನಾಡಿ, ಇಂದಿನ ತಾಂತ್ರಿಕ ಯುಗದಲ್ಲಿ ಕಂಪ್ಯೂಟರ್ ಜ್ಞಾನ ಅತ್ಯಗತ್ಯವಾಗಿದ್ದು, ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ಕೌಶಲಗಳನ್ನು ವೃದ್ಧಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ. ಯೋಗೀಶ್ ಬಿ. ಅವರು ವಿದ್ಯಾರ್ಥಿಗಳ ಸಕ್ರಿಯ ಭಾಗವಹಿಸುವಿಕೆಗೆ ಮೆಚ್ಚುಗೆ ವ್ಯಕ್ತಪಡಿಸಿ, ಕೌಶಲಾಭಿವೃದ್ಧಿಯು ಜೀವನದ ಅವಿಭಾಜ್ಯ ಅಂಗವಾಗಲಿ ಎಂದು ಹಾರೈಸಿದರು.

ತರಬೇತಿ ಪಡೆದ ವಿದ್ಯಾರ್ಥಿಗಳಾದ ಸಾನಿಯಾ, ಶರತ್ ಹಾಗೂ ಅರ್ಪಿತಾ ತಮ್ಮ ಅನುಭವ ಹಂಚಿಕೊಂಡು, ಹೊರಗಡೆ ಹೆಚ್ಚಿನ ಶುಲ್ಕ ನೀಡಿ ಕಲಿಯಬೇಕಾದ ಕಂಪ್ಯೂಟರ್ ತರಬೇತಿಯನ್ನು ಕಾಲೇಜಿನಲ್ಲಿ ಉಚಿತವಾಗಿ ಪಡೆಯಲು ಅವಕಾಶ ದೊರೆತಿದೆ. ಇದು ನಮ್ಮ ಭವಿಷ್ಯದ ಉದ್ಯೋಗಾವಕಾಶಗಳಿಗೆ ಸಹಕಾರಿಯಾಗಲಿದೆ, ಎಂದು ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಇಂಗ್ಲಿಷ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಸುಷ್ಮಾ ಎಲ್. ಬಿರಾದಾರ್, ಇತಿಹಾಸ ವಿಭಾಗದ ಮುಖ್ಯಸ್ಥರಾದ ಧನಂಜಯ್ ಹಾಗೂ ಉದ್ಯೋಗ ಮಾಹಿತಿ ಮತ್ತು ತರಬೇತಿ ಕೋಶದ ಸಂಯೋಜಕಿ ಹಾಗೂ ಕಾರ್ಯಕ್ರಮದ ಸಂಘಟಕರಾದ ಲಕ್ಷ್ಮಿ ಎಸ್. ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ತರಬೇತಿ ಪಡೆದ ಎಲ್ಲಾ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ರೈತರು ರೇಷ್ಮೆ ಕೃಷಿಯಲ್ಲಿ ವೈಜ್ಞಾನಿಕತೆಯನ್ನು ಅಳವಡಿಸಿಕೊಳ್ಳಿ

ಸೂರ್ಯಪ್ರಗತಿ ನ್ಯೂಸ್.ಕಾಂ



ಮಧುಗಿರಿ: ರೇಷ್ಮೆ ಕೃಷಿಯಲ್ಲಿ ವೈಜ್ಞಾನಿಕತೆಯನ್ನು ಅಳವಡಿಸಿಕೊಂಡು ರೈತರು ಇದರ ಉಪಯೋಗವನ್ನು ಬಳಸಿಕೊಳ್ಳುವ ಮೂಲಕ ರೇಷ್ಮೆ ಕೃಷಿಯಲ್ಲಿ ಉತ್ತಯ ಆದಾಯ ಗಳಿಸಿಕೊಳ್ಳುವಂತೆ ರೇಷ್ಮೆ ಬೆಳೆಗಾರರಿಗೆ ಉಪ ವಿಭಾಗಾಧಿಕಾರಿ ಗೋಟೂರು ಶಿವಪ್ಪ ತಿಳಿಸಿದರು.

ಪಟ್ಟಣದ ರೋಟರಿ ಭವನದಲ್ಲಿ ರೇಷ್ಮೆ ಇಲಾಖೆ ವತಿಯಿಂದ ನಡೆದ ರೇಷ್ಮೆ ಬೆಳೆಗಾರರಿಗೆ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು ಸ್ಪರ್ಧಾತ್ಮಕ ಯುಗದಲ್ಲಿ ರೈತರು ನೂತನ ತಂತ್ರಜ್ಞಾನವನ್ನು ತಿಳಿದುಕೊಂಡಾಗ ಮಾತ್ರ ಉತ್ತಮ ಬೆಳೆ ಬೆಳೆಯಬಹುದು ರೈತರು ಬೆಳೆದ ಬೆಳೆಗೆ ಉತ್ತಮ ಬೆಲೆ ಸಿಕ್ಕಾಗ ಮಾತ್ರ ರೈತರಲ್ಲಿ ಮಂದಹಾಸ ಕಾಣಬಹುದು ರೇಷ್ಮೆ ಮನುಷ್ಯನ ಬದುಕಿಗೆ ಆಧಾರ ಮತ್ತು ಜೀವನ ಸಾರ್ಥಕಗೊಳಿಸುವ ಬೆಳೆ ಎಂದು ತಿಳಿಸಿದರು.

ರೇಷ್ಮೆ ಇಲಾಖೆಯ ಉಪನಿರ್ದೇಶಕ ಲಕ್ಷ್ಮೀನರಸಯ್ಯ ಮಾತನಾಡಿ ಜಿಲ್ಲೆಯಲ್ಲಿ 10,000 ರೇಷ್ಮೆ ಬೆಳೆಗಾರರ 8000 ಹೆಕ್ಟರ್ ವಿಸ್ತೀರ್ಣದಲ್ಲಿ ಬೆಳೆ ಬೆಳೆಯುತ್ತಿದ್ದಾರೆ ಮಧುಗಿರಿ ಉಪವಿಭಾಗದಲ್ಲಿ ಹೆಚ್ಚು ಮಂದಿ ರೇಷ್ಮೆ ಬೆಳೆ ಬೆಳೆಯುತ್ತಿದ್ದಾರೆ ಇದೇ ಅಲ್ಲದೆ ಬೈ ಹೊಲ್ಟೀನ್ ಬೆಳೆಯನ್ನು ತುಮಕೂರು ಜಿಲ್ಲೆಯಲ್ಲಿ ಹೆಚ್ಚಾಗಿ ಬೆಳೆಯುತ್ತಿದ್ದಾರೆ ತಾಲೂಕಿನಲ್ಲಿ 1692ಕ್ಕೂ ಹೆಚ್ಚು ಮಂದಿ ರೇಷ್ಮೆ ಬೆಳೆಗಾರರು 1607ಹೆಕ್ಟರ್ ವಿಸ್ತೀರ್ಣದಲ್ಲಿ ಹಿಪ್ಪು ನೇರಳೆ ರೇಷ್ಮೆ ಬೆಳೆ ಬೆಳೆಯುತ್ತಿದ್ದಾರೆ ಸರ್ಕಾರ ಮತ್ತು ಇಲಾಖೆ ರೇಷ್ಮೆ ಬೆಳೆಗಾರರ ಜೊತೆಗಿದೆ ರೇಷ್ಮೆ ಬೆಳೆ ವಿಸ್ತರಿಸಿ ಹೆಚ್ಚು ಹೆಚ್ಚು ಮಂದಿ ರೇಷ್ಮೆ ಬೆಳೆಯುವುದರಿಂದ ಉಪ ವಿಭಾಗವನ್ನು ರೇಷ್ಮೆ ನಾಡು ಎಂದು ಪ್ರಸಿದ್ಧಗೊಳಿಸಬಹುದು ಎಂದು ತಿಳಿಸಿದರು.

ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕ ಮೋಹನ್ ಮಾತನಾಡಿ ರೇಷ್ಮೆ ಹುಳು ಸಾಗಾಣಿಕೆ ಮನೆ ಕಟ್ಟುವುದಕ್ಕೆ ಮುಂಚೆ ಡಿಶಾಂಕ್ ಆಪ್ ಮೂಲಕ ಸ್ಥಳ ತಮ್ಮದೇ ಎಂದು ಖಚಿತಪಡಿಸಿಕೊಂಡ ನಂತರ ರೇಷ್ಮೆ ಹುಳು ಸಾಗಾಣಿಕೆ ಮನೆ ನಿರ್ಮಾಣ ಮಾಡತಕ್ಕದ್ದು ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಡಾ. ಶಶಿಧರ್ ಮಾತನಾಡಿ ಮಣ್ಣು ಪರೀಕ್ಷೆ ಹಿಪ್ಪು ನೇರಳೆ ಬೇಸಾಯ ಬೇಸಿಗೆಯಲ್ಲಿ ತೋಟದ ನಿರ್ವಹಣೆ ಹಿಪ್ಪು ನೇರಳೆ ಗಿಡಗಳಿಗೆ ಭಾದಿಸುವ ಕೀಟ ಹಾಗೂ ರೋಗಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೃಷಿಕ ಸಮಾಜದ ಉಪಾಧ್ಯಕ್ಷ ಪೆದ್ದ ದಾಸ ರೆಡ್ಡಿ, ರೇಷ್ಮೆ ಬಿತ್ತನೆ ಕೋಠಿಯ ಉಪನಿರ್ದೇಶಕ ಮೋಹನ್, ಅಧಿಕಾರಿ ವರ್ಗದ ಕೆ ಸಿ ರಾಜಣ್ಣ, ವೀರಣ್ಣ, ರಮೇಶ್, ಶ್ರೀಕಾಂತ್, ನಳಿನ ,ಕಾವ್ಯ ಹಾಗೂ ರೈತರು ಹಾಜರಿದ್ದರು

## ಗಂಗಸಂದ್ರದಲ್ಲಿ ಸರ್ಕಾರಿ ಶಾಲೆಗೆ ಶೌಚಾಲಯ ಇಲ್ಲ



ಗಂಗಸಂದ್ರದಲ್ಲಿ ಸರ್ಕಾರಿ ಶಾಲೆಯಿದ್ದು ಶಾಲೆಗೆ ಶೌಚಾಲಯ ಇಲ್ಲದಿರುವುದು ಸಹ ದೊಡ್ಡ ಸಮಸ್ಯೆಯಾಗಿದೆ. ಹಿಂದುಳಿದ ಮತ್ತು ಮಧ್ಯಮ ವರ್ಗದ ಜನರು ಅಧಿಕವಾಗಿ ವಾಸ ಮಾಡುವ ಈ ಭಾಗದಲ್ಲಿ ಸರ್ಕಾರಿ ಶಾಲೆಗೆ ಸಾರ್ವಜನಿಕರು ತಮ್ಮ ಮಕ್ಕಳನ್ನು ದಾಖಲಿಸಿದ್ದು, ಶಾಲೆಗೆ ಅಗತ್ಯವಾಗಿ ಬೇಕಿರುವ ಶೌಚಾಲಯವನ್ನು ಸಹ ಸ್ಥಳೀಯ ಆಡಳಿತ ಮತ್ತು ಶಾಲಾ ಶಿಕ್ಷಣ ಇಲಾಖೆ ಒದಗಿಸದೆ ಇರುವುದರಿಂದ ವಿದ್ಯಾರ್ಥಿಗಳ ಹಕ್ಕುಗಳ ಹರಣವಾಗಿದೆ. ಶಾಲೆಯಲ್ಲಿ ಕುಡಿಯುವ ನೀರು ಶೌಚಾಲಯ ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕಿರುವುದು ಸರ್ಕಾರದ ಆದ್ಯ ಕರ್ತವ್ಯವಾಗಿದ್ದರೂ ಈ ಬಗ್ಗೆ ಕಿಂಚಿತ್ ಗಮನಹರಿಸದ ಅಧಿಕಾರಿಗಳ ನಡೆಯ ಬಗ್ಗೆ ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.